ಸಂಪುಟ : 10 ಸಂಚಿಕೆ: 149 ಪುಟ : 4+2 ಬೆಲೆ: 3.00 ಗುರುವಾರ ಜುಲೈ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 149 Pages : 4+2 Price : 3.00 Thursday July 17 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ದತ್ತಿ ಉಪನ್ಯಾಸ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ದಿ. ಶ್ರೀಮತಿ ಇಂದುಮತಿ ಲಕ್ಷ್ಮಣರಾವ್ ಪೊತ್ನೀಸ ಇವರ ಸ್ಮಾರಕ ದತ್ತಿ ಉಪನ್ಯಾಸ ನಿಮಿತ್ತ ಮೊಣಕಾಲು ಸುರಕ್ಷತೆ ಕುರಿತು ವಿಚಾರ ಸಂಕಿರಣವನ್ನು ಜುಲೈ 18ರಂದು ಸಾಯಂಕಾಲ 5 ಗಂಟೆಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಅತಿಥಿ ಉಪನ್ಯಾಸಕರಾಗಿ ಡಾ. ಶರದ ಶಿರೋಳ ಆಗಮಿಸಲಿದ್ದಾರೆ. ಸಮಾರಂಭದಲ್ಲಿ ಕೆ.ಸಿ.ಪಿ.ಎಸ್.ಲಿ ಬೆಂಗಳೂರು ಇದರ ನೂತನ ರಾಜ್ಯ ಉಪಾಧ್ಯಕ್ಷರಾದ ನಾಗರತ್ನ ಶಿವಣ್ಣ ಮುಳಗುಂದ ಇವರನ್ನು ಸನ್ಮಾನಿಸಲಾಗುವುದು. ಅಧ್ಯಕ್ಷತೆಯನ್ನು ಸಂಸ್ಥೆಯ ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ವಹಿಸುವರು. ಸಂಸ್ಥೆಯ ದತ್ತಿ ಉಪನ್ಯಾಸ ಉಪ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ, ಮಹಿಳಾ ಘಟಕದ ಉಪಾಧ್ಯಕ್ಷರಾದ ದೀಪಾ ಎಸ್.ಗದಗ, ಸುಷ್ಮಾ ಎಸ್.ಜಾಲಿ, ಸುಜಾತಾ ಎಸ್.ಗುಡಿಮನಿ, ಸಹ ಗೌರವ ಕಾರ್ಯದರ್ಶಿ ಲಲಿತಾ ಜಿ.ತಡಸದ, ಸುಧಾ ಸಿ.ಹುಣಸಿಕಟ್ಟಿ ಹಾಗೂ ಕೋಶಾಧ್ಯಕ್ಷರಾದ ಪೂರ್ಣಿಮಾ ಕೆ.ಆಟದ ಪಾಲ್ಗೊಳ್ಳುವರು.

ಸಂಸ್ಥೆಯ ಮಹಿಳಾ ಘಟಕದ ಸದಸ್ಯರು, ದತ್ತಿ ಉಪನ್ಯಾಸದ ಕುಟುಂಬ ವರ್ಗದವರು, ಆಸಕ್ತರು ಆಗಮಿಸುವಂತೆ ಸಂಸ್ಥೆಯ ಮಹಿಳಾ ಘಟಕದ ಗೌರವ ಕಾರ್ಯದರ್ಶಿ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.19ರಂದು ಮೂಲ ದಾಖಲಾತಿ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಪಿಎಮ್‌ಅಭೀಮ್ ಕಾರ್ಯಕ್ರಮದಡಿಯಲ್ಲಿ ಖಾಲಿಯಿರುವ ಕಿರಿಯ ಪ್ರಯೋಗಶಾಲಾ ತಂತ್ರಜ್ಞ ಅಧಿಕಾರಿ/ಎಲ್‌ಡಿಸಿ ಮತ್ತು ಶುಶ್ರೂಷ ಅಧಿಕಾರಿ ಹುದ್ದೆಗೆ ರೋಸ್ಟರ್ ಹಾಗೂ ಮೇರಿಟ್ ಆಧಾರದ ಮೇಲೆ ಗದಗ ಎನ್‌ಐಸಿ ವೆಬ್‌ಸೈಟ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಲ್ಲಿ ರೋಸ್ಟರ್ ಹಾಗೂ ಮೇರಿಟ್ ಅನ್ವಯ 1:20 ಅನುಪಾತದ ಕಿರಿಯ ಪ್ರಯೋಗಶಾಲಾ ತಂತ್ರಜ್ಞ ಅಧಿಕಾರಿ ಕಂ ಎಲ್‌ಡಿಸಿ ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಗಳೊಂದಿಗೆ ಜುಲೈ 18 ರಂದು ಹಾಗೂ ಶುಶ್ರೂಷಕ ಅಧಿಕಾರಿ ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಗಳೊಂದಿಗೆ ಜುಲೈ 19 ರಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ ಗದಗ ಇಲ್ಲಿ ಬೆಳಿಗ್ಗೆ 10 ಗಂಟೆಗೆ ಹಾಜರಿರಲು ಸೂಚಿಸಿದೆ. ರೋಸ್ಟರ್ ಹಾಗೂ ಮೆರಿಟ್ ಆಧಾರದ 1:20 ಅನುಪಾತ ಅಭ್ಯರ್ಥಿಗಳ ವಿವರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕದಲ್ಲಿ ಲಗತ್ತಿಸಿದೆ.

**ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಅವರಿಂದ ಸುದ್ದಿಗೋಷ್ಠಿ**

# ಸಾರ್ವಜನಿಕರು–ಪೊಲೀಸರ ಬಾಂಧವ್ಯ ಉತ್ತಮವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಐತಿಹಾಸಿಕ ಗದಗ ಜಿಲ್ಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಸೇವೆ ಸಲ್ಲಿಸಲು ಅವಕಾಶ ದೊರೆತಿದೆ. ನಿಕಟಪೂರ್ವ ಎಸ್‌ಪಿ ಬಿ.ಎಸ್. ನೇಮಗೌಡ ಜನಸ್ನೇಹಿಯಾಗಿ ಸೇವೆ ಸಲ್ಲಿಸಿದ್ದಾರೆ. ಅವರಂತೆ ನಾನೂ ಕೂಡ ಕೆಲಸ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಸಾರ್ವಜನಿಕರೊಂದಿಗೆ ಪೊಲೀಸರ ಉತ್ತಮ ಬಾಂಧವ್ಯ, ಸಣ್ಣಪುಟ್ಟ ದೂರುಗಳಿಗೂ ಸೂಕ್ತವಾಗಿ



ಸ್ಪಂದಿಸುವುದು ಸೇರಿದಂತೆ ಜಿಲ್ಲೆಯ ಪೊಲೀಸ್ ವ್ಯವಸ್ಥೆಯನ್ನ ಜನಸ್ನೇಹಿಯಾಗಿಸಲು ಆದ್ಯತೆ ನೀಡುತ್ತೇನೆ ಎಂದು ನೂತನ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ ಹೇಳಿದರು.

ಬುಧವಾರ ಸಂಜೆ ನಗರದ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದರು.

ಪೊಲೀಸ್ ಇಲಾಖೆ ಜನರೊಂದಿಗೆ ಸದಾ ಜನಸ್ನೇಹಿಯಾಗಿರಬೇಕು. ಇಲಾಖೆ ಎಂದರೆ ಸಾರ್ವಜನಿಕರು ಭಯಪಡಬಾರದು. ಸಾಮಾನ್ಯರೊಂದಿಗೂ ಕೂಡ ಪೊಲೀಸ್ ಇಲಾಖೆ ಉತ್ತಮ ಬಾಂಧವ್ಯ ಹೊಂದಬೇಕು ಎನ್ನುವುದೇ ನನ್ನ ಮೂಲ ಉದ್ದೇಶವಾಗಿದೆ. ಭಾಗಶಃ ಪೊಲೀಸ್ ಠಾಣೆಗೆ ಬರುವವರು ದುಃಖದಲ್ಲಿಯೇ ಬರುತ್ತಾರೆ. ಅವರ ಕಷ್ಟಗಳಿಗೆ ಸಮಾಧಾನದಿಂದ ಸ್ಪಂದನೆ ನೀಡುವುದೇ ನಮ್ಮ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ಗದಗ ಜಿಲ್ಲೆಯಲ್ಲಿ ಥರ್ಡ್ ಐ ಸೇರಿದಂತೆ ಅನೇಕ ತಂತ್ರಜ್ಞಾನಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ಅವುಗಳನ್ನು ಮುಂದುವರೆಸಿಕೊಂಡು ಹೋಗುತ್ತೇನೆ. ಈಗಾಗಲೇ ಜಿಲ್ಲೆಯ ವಿಷಯವಾಗಿ ಡಿಎಸ್‌ಪಿ, ಪಿಎಸ್‌ಐ, ಇನ್ಸ್‌ಪೆಕ್ಟರ್ ಹಾಗೂ ಇಲಾಖೆಯ ಸಿಬ್ಬಂದಿ ವರ್ಗದವರ ಜೊತೆ ಸುದೀರ್ಘವಾಗಿ ಚರ್ಚೆ ನಡೆಸಿ ಶಾಂತಿ ಕಾಪಾಡುವ ನಿಟ್ಟಿನಲ್ಲಿ ನನ್ನ ಉದ್ದೇಶವನ್ನು ಅವರ ಬಳಿ ಹೇಳಿದ್ದೇನೆ. ರಾತ್ರಿ ವೇಳೆ ಗಸ್ತು ತಿರುಗುವ ಸಿಬ್ಬಂದಿಗಳು ಸರಿಯಾಗಿ ಕಾರ್ಯ ನಿರ್ವಹಿಸುವಂತೆ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

ಇಂದಿನ ಆಧುನಿಕ ದಿನಮಾನಗಳಲ್ಲಿ ಸಾಮಾಜಿಕ ಜಾಲತಾಣ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಿದೆ. ಹೀಗಾಗಿ, ಟ್ವಿಟರ್‌ನಲ್ಲಿ ಹೆಚ್ಚು ಸಕ್ರಿಯವಾಗಿ ಜಿಲ್ಲೆಯಲ್ಲಿ ನಡೆಯುವ ಕಾರ್ಯಕ್ರಮಗಳ ಬಗ್ಗೆ ವಿವರವಾಗಿ ಮಾಹಿತಿ ನೀಡಲು ಪ್ರಯತ್ನಿಸಲಾಗುವುದು. ಜಿಲ್ಲೆಯಾದ್ಯಂತ ಪ್ರತಿ ಭಾನುವಾರ ದಲಿತರ ಕಾಲೋನಿಗಳಿಗೆ ಭೇಟಿ ನೀಡಿ ಸಭೆಯನ್ನು ಆಯೋಜಿಸಿ ಅವರ ಕುಂದು-ಕೊರತೆ ಆಲಿಸುತ್ತೇನೆ ಎಂದು ತಿಳಿಸಿದರು.

ಪೊಲೀಸರ ದೈಹಿಕ ಸಾಮರ್ಥ್ಯವನ್ನು ಸುಧಾರಿಸಲು ವಿಶೇಷ ಯೋಜನೆಗಳನ್ನು ರೂಪಿಸಲಾಗುವುದು. ಮುಂದಿನ 2 ತಿಂಗಳಲ್ಲಿ ಬಿಎಂಪಿ (ಬಾಡಿ ಮಾಸ್ ಇಂಡೆಕ್ಸ್) ಬಗ್ಗೆ ವಿಶೇಷ ಗಮನ ಹರಿಸಲಾಗುವುದು ಎಂದು ನೂತನ ಎಸ್‌ಪಿ ರೋಹನ್ ಜಗದೀಶ ತಿಳಿಸಿದರು.

**ಎಸ್‌ಪಿ ರೋಹನ್ ಜಗದೀಶ ಪರಿಚಯ**

2019ರ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿರುವ ರೋಹನ್ ಜಗದೀಶ್, ಬಿಎ, ಎಲ್‌ಎಲ್‌ಬಿ ಪದವೀಧರರು. ಯುಪಿಎಸ್‌ಸಿ ಪರೀಕ್ಷೆಯಲ್ಲಿ 224ನೇ ರ್‍ಯಾಂಕ್ ಗಳಿಸಿದ್ದಾರೆ. ಮೂಲತಃ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದವರಾದ ರೋಹನ್, ದಕ್ಷಿಣ ಕನ್ನಡದ ಉಪ್ಪಿನಂಗಡಿ ಹಾಗೂ ಶಿವಮೊಗ್ಗ ಜಿಲ್ಲೆಯ ಸಾಗರ ಪೊಲೀಸ್ ಠಾಣೆಗಳಲ್ಲಿ ಕಾರ್ಯ ನಿರ್ವಹಿಸಿದ್ದಾರೆ. ಬೆಳಗಾವಿ ಡಿಸಿಪಿಯಾಗಿ ಸೇವೆ ಸಲ್ಲಿಸಿದ ನಂತರ ಗದಗ ಜಿಲ್ಲೆಗೆ ಪ್ರಥಮ ಬಾರಿಗೆ ವರಿಷ್ಠಾಧಿಕಾರಿಯಾಗಿ ನೇಮಕಗೊಂಡಿದ್ದಾರೆ.

> ಗದಗ–ಬೆಟಗೇರಿ ಅವಳಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಇರುವ ರೌಡಿಶೀಟರ್‌ಗಳ ಪರೇಡ್ ನಡೆಸಲಾಗುವುದು. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಇಲಾಖೆಯ ಅಧಿಕಾರಿಗಳಿಗೆ ತಕ್ಷಣವೇ ಸೂಚಿಸುತ್ತೇನೆ. ಅಲ್ಲದೆ, ಸಾಮಾಜಿಕ ಜಾಲತಾಣಗಳಲ್ಲಿ ಗಲಭೆ ಎಬ್ಬಿಸುವ ಪೋಸ್ಟ್ ಹಾಕಿದರೆ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು.
>
> **– ರೋಹನ್ ಜಗದೀಶ.**
> **ನೂತನ ಜಿಲ್ಲಾ ಪೊಲೀಸ್ ಅಧೀಕ್ಷಕರು.**

**ಲಕ್ಕುಂಡಿಯಲ್ಲಿ ಜೆ.ಜೆ.ಎಂ ಅವೈಜ್ಞಾನಿಕ ಕಾಮಗಾರಿ ತಡೆಹಿಡಿದ ಜಿ.ಪಂ ಸಿ.ಇ.ಒ**

# ಇಂತಹ ಕಾಮಗಾರಿಯನ್ನು ಎಲ್ಲಿಯೂ ಕಂಡಿಲ್ಲ!

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕೇಂದ್ರ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಜಲ ಜೀವನ ಮಿಷನ್ ಕಾಮಗಾರಿಯನ್ನು ಇಲ್ಲಿಯ 9ನೇ ವಾರ್ಡಿನಲ್ಲಿ ಅವೈಜ್ಞಾನಿಕವಾಗಿ ನಡೆಸಿ ಕಾಮಗಾರಿಯನ್ನು ಪೂರ್ಣಗೊಳಿಸುವ ಹಂತದಲ್ಲಿದ್ದ ಗುತ್ತಿಗೆದಾರರಿಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಭರತ್ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ ಪ್ರಸಂಗ ಬುಧವಾರ ನಡೆಯಿತು.

ಕಳೆದ 30 ವರ್ಷಗಳಿಂದ 8–10 ದಿನಕ್ಕೊಮ್ಮೆ ನೀರು ಪೂರೈಕೆಯಾಗುತ್ತಿದ್ದು, ಈ ಬಗ್ಗೆ ಹಲವಾರು ವರ್ಷಗಳಿಂದ ಹೋರಾಟ ಮಾಡುತ್ತಾ ಬಂದರೂ ಸಹ ಸಮಸ್ಯೆ ಬಗೆಹರಿದಿಲ್ಲ. ಈಗ ಜೆ.ಜೆ.ಎಂ ಕಾಮಗಾರಿ ಕೂಡ ವೈಜ್ಞಾನಿಕವಾಗಿ ನಡೆಯುತ್ತಿಲ್ಲ. ಒಂದು ವರ್ಷದಲ್ಲಿ ಪೂರ್ಣಗೊಳ್ಳುವ ಕಾಮಗಾರಿ ಮೂರು ವರ್ಷವಾದರೂ ಪೂರ್ಣಗೊಂಡಿಲ್ಲ. ಹಳೆಯ ಪೈಪ್‌ಲೈನ್ ದುರಸ್ತಿಗೆ ಬಂದರೆ 10–15 ದಿನವಾದರೂ ದುರಸ್ತಿ ಮಾಡುವುದಿಲ್ಲ ಎಂದು ವಾರ್ಡ್‌ನ ಸಾರ್ವಜನಿಕರು ದೂರಿದರು. ಇದಕ್ಕೆ ಪಿ.ಡಿ.ಒ ಅವರನ್ನು ತರಾಟೆಗೆ ತೆಗೆದುಕೊಂಡ ಸಿ.ಇ.ಒ, ತಕ್ಷಣವೇ ಸಮಸ್ಯೆ ಬಗೆಹರಿಸಬೇಕು. ಅದಕ್ಕೆ ಸಂಪನ್ಮೂಲ ಕೊರತೆಯಾದರೆ ನಮ್ಮನ್ನು ಸಂಪರ್ಕ ಮಾಡಬೇಕು ಎಂದು ಸೂಚಿಸಿದರು.



ಈ ಕುರಿತು ಜುಲೈ 14ರಂದು 9ನೇ ವಾರ್ಡಿನ ನಾಗರಿಕರು ಗ್ರಾಮ ಪಂಚಾಯಿತಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಭರತ್ ಅವರಿಗೆ ಮನವಿ ಸಲ್ಲಿಸಿದ್ದರು. ಮನವಿಗೆ ಸ್ಪಂದಿಸಿದ ಭರತ್ ಅವರು ಗ್ರಾಮದ 9ನೇ ವಾರ್ಡಿಗೆ ಆಗಮಿಸಿ ಜೆ.ಜೆ.ಎಂ. ಕಾಮಗಾರಿಯ ಸ್ಥಳಗಳ ಪರಿಶೀಲನೆ ನಡೆಸಿದರು. ಮಾರುತಿ ದೇವಸ್ಥಾನದಿಂದ ವಿರೂಪಾಕ್ಷೇಶ್ವರ ದೇವಸ್ಥಾನದವರೆಗೂ ಅವೈಜ್ಞಾನಿಕವಾಗಿ ರಸ್ತೆಯ ಮೇಲೆಯೇ ನೀರು ಪೂರೈಕೆಯ ಪೈಪ್‌ಗಳನ್ನು ಜೋಡಿಸಲಾಗಿದೆ. ಮಾರುತಿ ದೇವಸ್ಥಾನದ ಮುಂದಿರುವ ಗಟಾರಿನಲ್ಲಿ ಎಚ್.ಡಿ.ಪಿ.ಪಿಇ ಪೈಪ್ ಅಳವಡಿಸಿದ್ದನ್ನು ಸಾರ್ವಜನಿಕರು ಅಧಿಕಾರಿಗಳ ಗಮನಕ್ಕೆ ತಂದು ಗುತ್ತಿಗೆದಾರರು ಮತ್ತು ಅಧಿಕಾರಿಗಳ ಮೇಲೆ ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳದಲ್ಲಿಯೇ ಇದ್ದ ಗುತ್ತಿಗೆದಾರರನ್ನು ತರಾಟೆಗೆ ತೆಗೆದುಕೊಂಡ ಸಿ.ಇ.ಒ ಎಸ್. ಭರತ್ ಅವರು, ಯೋಜನೆಯ ವಿರುದ್ಧ ಕಾಮಗಾರಿ ನಡೆಸಲು ಯಾರು ಹೇಳಿದರು, ರಸ್ತೆಯ ಮೇಲೆ ಪೈಪ್ ಜೋಡಣೆಯ ಕಾಮಗಾರಿಯನ್ನು ದೇಶದ ಯಾವ ಊರಿನಲ್ಲಿಯೂ ಕಂಡಿಲ್ಲ. ಕಾಮಗಾರಿ ಯೋಜನೆಯಂತೆ ನಡೆಯಬೇಕು. ಇದರಲ್ಲಿ ಪ್ರತಿ ಮನೆಗೆ ನೀರು ಪೂರೈಕೆಯ ಬಗ್ಗೆ ಗಮನ ಹರಿಸಬೇಕು. ಪಿ.ಡಿ.ಒ ಅವರು ಈ ಬಗ್ಗೆ ಪೂರ್ಣ ಪ್ರಮಾಣದ ಕಾಳಜಿ ವಹಿಸಬೇಕು.

> ಗ್ರಾ.ಪಂ ಜನಪ್ರತಿನಿಧಿಗಳು, ಶಾಸಕರು, ಸಚಿವರು ಸೇರಿದಂತೆ ಯಾರ ಒತ್ತಡಕ್ಕೂ ಮಣಿಯದೇ ಪಾರದರ್ಶಕವಾಗಿ ಯೋಜನೆಯಂತೆ ಜೆ.ಜೆ.ಎಂ ಕಾಮಗಾರಿ ನಡೆಯಬೇಕು. ವಿಳಂಬವಾದರೂ ಸರಿ, ಆದರೆ ಕಾಮಗಾರಿಯ ದಿಕ್ಕು ತಪ್ಪಬಾರದು.
>
> **– ಎಸ್.ಭರತ್.**
> **ಜಿ.ಪಂ ಸಿ.ಇ.ಒ.**

ನಾಳೆಯಿಂದಲೇ ರಸ್ತೆಯ ಹೊರಗಡೆ ಇರುವ ಜಿ.ಐ ಪೈಪನ್ನು ಕಿತ್ತುಹಾಕಿ ರಸ್ತೆಯ ಒಳಗಡೆ ಎಚ್.ಡಿ.ಪಿ.ಪಿ.ಐ ಪೈಪನ್ನು ಅಳವಡಿಸಬೇಕು. ಗಟಾರು ಹೊಳಗಡೆ ಮತ್ತು ಪಕ್ಕಕ್ಕೆ ಹಾಕಿರುವ ಪೈಪ್‌ಲೈನ್‌ನ್ನು ತೆಗೆದು ಹಾಕಿ ಸಂಭಂದಪಟ್ಟ ಯೋಜನೆಯ ಇಂಜಿನಿಯರ್ ಸಲಹೆಯಂತೆ ಕಾಮಗಾರಿಯನ್ನು ನಡೆಸಬೇಕು ಎಂದು ಸೂಚಿಸಿದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾಮಗಾರಿಯ ಗುಣಮಟ್ಟ ಕಾಯ್ದುಕೊಳ್ಳಬೇಕು ಎಂದು ಹೇಳಿದರು. ಪಿ.ಡಿ.ಒ ಅಮೀರನಾಯಕ, ಕಾರ್ಯದರ್ಶಿ ಪ್ರದೀಪ ಆಲೂರು, ಗ್ರಾ.ಪಂ ಸದಸ್ಯರಾದ ವೀರಣ್ಣ ಚಕ್ರಸಾಲಿ, ಲಲಿತಾ ಗದಗಿನ, ಮಹಾಂತೇಶ ಕಮತರ, ಕುಬೇರಪ್ಪ ಬೆಂತೂರ, ತಾ.ಪಂ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ, ನಾಗಪ್ಪ ಕುಂಬಾರ, ವೀರಭದ್ರಪ್ಪ ಕುಂಬಾರ, ಶಿವಪ್ಪ ಬಿನ್ನಾಳ ಸೇರಿದಂತೆ ವಾರ್ಡಿನ ನಾಗರಿಕರು ಇದ್ದರು.

**ದಾವಣಗೆರೆಯಲ್ಲಿ ಜರುಗುವ ವೀರಶೈವ ಶೃಂಗ ಸಮ್ಮೇಳನದ ಕುರಿತು ಮುಕ್ತಿಮಂದಿರ ಶ್ರೀಗಳ ಕರೆ**

# ಸಮಾಜದ ಸರ್ವರೂ ಪಾಲ್ಗೊಳ್ಳಿ



> ಜು.22ರಂದು ನಡೆಯುವ ಶೃಂಗ ಸಮ್ಮೇಳನವನ್ನು ರಾಜ್ಯ ರೈಲ್ವೆ ಸಚಿವ ವಿ.ಸೋಮಣ್ಣ ಉದ್ಘಾಟಿಸಲಿದ್ದಾರೆ. ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ, ಸಂಸದ ಬಸವರಾಜ ಬೊಮ್ಮಾಯಿ, ಬಿ.ವೈ. ರಾಘವೇಂದ್ರ, ಡಾ. ವಿಜಯ ಸಂಕೇಶ್ವರ, ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ, ಶಾಸಕರಾದ ಸಿ.ಸಿ. ಪಾಟೀಲ, ಬಿ.ಪಿ. ಹರೀಶ್, ಮಾಜಿ ಶಾಸಕರಾದ ಎಚ್.ಎಸ್. ಶಿವಶಂಕರ್, ಮಹಿಮಾ ಪಟೇಲ್ ಭಾಗಹಿಸುವರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಾಳೆಹೊನ್ನೂರ್ ದಾವಣಗೆರೆಯ ಶ್ರೀಮದಭಿನವ ರೇಣುಕ ಮಂದಿರದಲ್ಲಿ ಜು. 21, 22ರಂದು ವೀರಶೈವ ಪೀಠಾಚಾರ್ಯರ ಹಾಗೂ ಶಿವಾಚಾರ್ಯರ ಶೃಂಗ ಸಮ್ಮೇಳನ ನಡೆಯಲಿದ್ದು, ಬಾಳೆಹೊನ್ನೂರು ರಂಭಾಪುರಿ ಪೀಠದ ವೀರಸಿಂಹಾಸನಾಧೀಶ್ವರ ಶ್ರೀ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಜಗದ್ಗುರುಗಳ ದಿವ್ಯ ಸಾನ್ನಿಧ್ಯದಲ್ಲಿ ಶ್ರೀ ಜಗದ್ಗುರು ಪಂಚಪೀಠಾಧೀಶ್ವರರು ಸಾನ್ನಿಧ್ಯ ವಹಿಸಲಿದ್ದಾರೆ ಎಂದು ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರು ಹಾಗೂ ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ವೀರಶೈವ ಲಿಂಗಾಯತ ಸಂಸ್ಕೃತಿ ಸಂವರ್ಧನೆ ಹಾಗೂ ಜಾತಿ ಗಣತಿಯ ಸಂದರ್ಭದಲ್ಲಿ ಕೈಗೊಳ್ಳಬೇಕಾದ ನಿಲುವುಗಳ ಕುರಿತು ಚರ್ಚೆ ನಡೆಯಲಿದೆ. 21ರ ಬೆಳಿಗ್ಗೆ 11 ಗಂಟೆಗೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷ, ಶಾಸಕ ಡಾ. ಶಾಮನೂರು ಶಿವಶಂಕರಪ್ಪ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ವೀರಶೈವ ಲಿಂಗಾಯತ ಸಮಾಜದ ಸರ್ವರು ಈ ಸಭೆಯಲ್ಲಿ ಪಾಲ್ಗೊಳ್ಳುವ ಮೂಲಕ ಸಭೆಗೆ ಹೆಚ್ಚಿನ ಮೆರಗು ನೀಡಬೇಕಾಗಿದೆ.

21ರಂದು ನಡೆಯುವ ಸಭೆಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಅರಣ್ಯ ಸಚಿವ ಈಶ್ವರ ಖಂಡ್ರೆ, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ, ಸಂಸದ ಜಗದೀಶ್ ಶೆಟ್ಟರ್, ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಶಿವರಾಜ ಪಾಟೀಲ, ಬಿ.ವೈ. ವಿಜಯೇಂದ್ರ, ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಅ.ಭಾ.ವೀ ಮಹಾಸಭೆ ರಾಜ್ಯಾಧ್ಯಕ್ಷ ಶಂಕರ್ ಬಿದರಿ, ಉಪಾಧ್ಯಕ್ಷ ಅಥಣಿ ವೀರಣ್ಣ,

▶▶3ನೇ ಪುಟಕ್ಕೆ

**ಯಡಹಳ್ಳಿಯ ಗ್ರಾಮಸ್ಥರು, ಶಾಲಾ ಸಿಬ್ಬಂದಿಗಳಿಂದ ಸಭಾಪತಿ ಬಸವರಾಜ ಹೊರಟ್ಟಿಯವರಿಗೆ ಸನ್ಮಾನ**

# ಹುಟ್ಟೂರಿನ ಜನರ ಪ್ರೀತಿಗೆ ಬೆಲೆ ಕಟ್ಟಲಾಗದು

■ವಿಜಯಸಾಕ್ಷಿ ಸುದ್ದಿ, ಮುಧೋಳ

ಹೆತ್ತ ತಂದೆ–ತಾಯಿಯ ಮಮತೆ, ಹುಟ್ಟೂರಿನ ಜನರ ಪ್ರೀತಿ, ಗೌರವ, ಕಲಿಸಿದ ಗುರುಗಳು ನೀಡಿದ ವಿದ್ಯೆಗೆ ಬೆಲೆ ಕಟ್ಟಲಾಗದು ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ವಿಧಾನ ಪರಿಷತ್ತಿನಲ್ಲಿ 45 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಯಡಹಳ್ಳಿಯ ಶಿವಲಿಂಗಪ್ಪ ಬಸಪ್ಪ ಹೊರಟ್ಟಿ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಯಡಹಳ್ಳಿಯ ಗ್ರಾಮಸ್ಥರು ಹಾಗೂ ಶಾಲಾ ಸಿಬ್ಬಂದಿಗಳು ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ನಿಮ್ಮ ಹಾಗೆ ಇಲ್ಲಿಯೇ ಹುಟ್ಟಿ, ಇಲ್ಲಿಯೇ ಕಲಿತು ಊರಿನ ಪ್ರತಿಯೊಂದು ಆಗು-ಹೋಗುಗಳನ್ನು ನೋಡುತ್ತಾ ಬೆಳೆದು ನಿಮ್ಮೆಲ್ಲರ ಪ್ರೀತಿ ಹಾರೈಕೆಯಿಂದ ಇಷ್ಟೊಂದು ಎತ್ತರಕ್ಕೆ ಬೆಳೆಯಲು ಸಾಧ್ಯವಾಗಿದೆ. ವಿಶೇಷವಾಗಿ ನನ್ನ ಹೆತ್ತ ತಂದೆ–ತಾಯಿಗಳ ಪ್ರೀತಿ,



ಹಾರೈಕೆ, ತ್ಯಾಗಗಳಿಂದ ಇದೆಲ್ಲ ಸಾಧ್ಯವಾಗಿದೆ. 45 ವರ್ಷಗಳಿಂದ ನನ್ನೊಂದಿಗೆ ಇದ್ದ ಶಿಕ್ಷಕ ಬಳಗದ ಋಣವನ್ನ ಈ ಜನ್ಮದಲ್ಲಿ ತೀರಿಸಲು ಸಾಧ್ಯವಿಲ್ಲ. ಇಂದಿಗೂ ನಾನು ಊರಿನೊಂದಿಗೆ ಇಟ್ಟುಕೊಂಡಿರುವ ಒಡನಾಟಕ್ಕೆ ನೀವು ತೋರುತ್ತಾ ಬಂದಿರುವ ಪ್ರೀತಿಯೇ ಸಾಕ್ಷಿ ಎಂದರು.

ಹಿರಿಯ ಸಹಕಾರಿ ಮುಖಂಡ ಗಿರೀಶ್ ಲಕ್ಕಾಣಿ ಮಾತನಾಡಿ, ಎಷ್ಟೋ ರಾಜಕಾರಣಿಗಳು ಎತ್ತರಕ್ಕೆ ಬೆಳೆದಂತೆ ತಮ್ಮ ಊರನ್ನೇ ಮರೆತುಬಿಡುತ್ತಾರೆ. ಅವರೆಲ್ಲರಿಗೂ ಅಪವಾದ ಆದರೆ ಬಸವರಾಜ ಹೊರಟ್ಟಿ ಎನ್ನುವಂತೆ ಇಷ್ಟೊಂದು ಎತ್ತರಕ್ಕೆ ಬೆಳೆದರೂ ಇಂದಿಗೂ ನಮ್ಮೂರಿನ ಜನರ ಒಡನಾಟದಲ್ಲಿ ಇದ್ದಾರೆ. ಊರಿನ ಪ್ರತಿಯೊಂದು ಕೆಲಸ-ಕಾರ್ಯದಲ್ಲಿ ತೊಡಗಿಕೊಳ್ಳುತ್ತಾರೆ. ಅವರು ಊರಿಗೆ ಮಾಡಿದ ಉಪಕಾರವನ್ನು ನಾವ್ಯಾರೂ ಮರೆಯುವಂತಿಲ್ಲ. ಅವರನ್ನು ಗೌರವಿಸುವುದು ಎಂದರೆ ನಮ್ಮನ್ನು ನಾವೇ ಗೌರವಿಸಿಕೊಂಡಂತೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಂದ್ರಶೇಖರ ಸ್ವಾಮೀಜಿ, ಭೀಮಪ್ಪ ತಳವಾರ, ರಾಜುಗೌಡ ಪಾಟೀಲ, ಮಿಥುನ ಕನಕರೆಡ್ಡಿ, ಸುವರ್ಣಪ್ಪ ಕೊಣ್ಣೂರ, ಎಂ.ಜಿ. ದಾಸರ, ಪ್ರಕಾಶ ಯರಗಟ್ಟಿ, ತಹಸೀಲ್ದಾರ್ ರಾಜಶೇಖರ ನಾಯಕ, ಡಿಡಿಪಿಐ ಎಚ್.ಜಿ. ಮಿರ್ಜಿ, ಪಿ.ಎನ್. ಕಾಂಬಳೆ, ವಿಜಯಲಕ್ಷ್ಮೀ ಪೆಟ್ಲೂರು, ವಿಜಯಲಕ್ಷ್ಮೀ ಹಸರೆಡ್ಡಿ, ವಿ.ಎಚ್. ಕೊಡಣ್ಣವರ, ವಿದ್ಯಾವತಿ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

> ಪ್ರತಿವರ್ಷ ಒಬ್ಬ ಬಡ ವಿದ್ಯಾರ್ಥಿಯ ಶಿಕ್ಷಣಕ್ಕೆ ನನ್ನ ತಂದೆಯವರು ಸಹಾಯ ಮಾಡುತ್ತಿದ್ದರು. ನನ್ನ ತಾಯಿ ನಿಮ್ಮ ತಂದೆಯ ಹಾದಿಯಲ್ಲಿ ಸಾಗಬೇಕೆಂದು ಹೇಳುತ್ತಿದ್ದರು. ಅವರ ಮಾತುಗಳಿಂದಾಗಿ ಈ ಹೈಟೆಕ್ ಶಾಲೆ ನಿರ್ಮಾಣಗೊಂಡಿದೆ. ಹುಟ್ಟೂರಿನ ಋಣ ತೀರಿಸುವ ಅವಕಾಶ ಸಿಕ್ಕಿದ್ದು ನನ್ನ ಸೌಭಾಗ್ಯ. ವಿಶೇಷವಾಗಿ ತಾವು ತೋರಿದ ಪ್ರೀತಿ, ಆದರಗಳು ಹುಟ್ಟಿದ ಊರನ್ನು ಬಿಟ್ಟು ಇರಲಾರದಂತೆ ಮಾಡಿವೆ. ತಾವು ನೀಡಿದ ಸನ್ಮಾನವನ್ನು ಅತ್ಯಂತ ಗೌರವದಿಂದ ಸ್ವೀಕರಿಸುವುದಾಗಿ ಹೊರಟ್ಟಿ ಹೇಳಿದರು.

## ಸಂಪಾದಕೀಯ

# ರೋಸ್ಟರ್ ಪಾಲನೆ: ಸಾಮಾಜಿಕ ಸಮಾನತೆ, ವಿಶ್ವಾಸಾರ್ಹತೆ ಪ್ರಶ್ನೆ

ಎಸ್ಸಿ-ಎಸ್ಟಿ ನೌಕರರ ಸಂಘದ ಮನವಿಯನ್ನು ಪುರಸ್ಕರಿಸಿ, ರಾಜ್ಯದಲ್ಲಿ ರೋಸ್ಟರ್ ನಿಯಮಗಳ ಅಸಮರ್ಪಕ ಅನುಷ್ಠಾನದ ಬಗ್ಗೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವುದು ಗಂಭೀರ ವಿಷಯವಾಗಿದೆ.

ಸರ್ಕಾರದ ಸ್ಪಷ್ಟ ಆದೇಶಗಳು ಮತ್ತು ಸುತ್ತೋಲೆಗಳ ಹೊರತಾಗಿಯೂ, ಕೆಲವು ಇಲಾಖೆಗಳಲ್ಲಿ ರೋಸ್ಟರ್ ಬಿಂದುಗಳನ್ನು ಅನುಸರಿಸದಿರುವುದು ಖಂಡನೀಯ. ಇದು ಕೇವಲ ಆಡಳಿತಾತ್ಮಕ ಲೋಪವಲ್ಲ, ಬದಲಿಗೆ ಸಂವಿಧಾನದ ಆಶಯವಾದ ಸಾಮಾಜಿಕ ಸಮಾನತೆಯ ತತ್ವಕ್ಕೆ ಧಕ್ಕೆ ತರುವಂತಹ ಬೆಳವಣಿಗೆ.

ಎಸ್ಸಿ, ಎಸ್ಟಿ ವರ್ಗದ ನೌಕರರ ಬಡ್ತಿ ಸ್ಥಗಿತದಿಂದಾಗಿ ಅಧಿಕಾರಿ ಮಟ್ಟದಲ್ಲಿ ಅಸಮಾಧಾನ ಮೂಡಿ, ಅದು ಸರ್ಕಾರದ ಕಾರ್ಯವೈಖರಿಯ ಮೇಲೆ ಪರಿಣಾಮ ಬೀರಬಹುದು ಎಂಬ ಖರ್ಗೆ ಅವರ ಎಚ್ಚರಿಕೆ ನಿರ್ಲಕ್ಷಿಸುವಂತದ್ದಲ್ಲ. ಇದು ಸರ್ಕಾರದ ವಿಶ್ವಾಸಾರ್ಹತೆಗೂ ಧಕ್ಕೆ ತರುವ ಸಾಧ್ಯತೆಯಿದೆ.

ಈ ಕೂಡಲೇ ಮುಖ್ಯಮಂತ್ರಿಗಳು ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ರೋಸ್ಟರ್ ನಿಯಮಗಳ ಕಟ್ಟುನಿಟ್ಟಿನ ಅನುಷ್ಠಾನಕ್ಕೆ ಸ್ಪಷ್ಟ ನಿರ್ದೇಶನಗಳನ್ನು ನೀಡಬೇಕು.

ರೋಸ್ಟರ್ ಪದ್ಧತಿ ಎನ್ನುವುದು ಕೇವಲ ಮೀಸಲಾತಿ ನಿಯಮವಲ್ಲ, ಅದು ಐತಿಹಾಸಿಕವಾಗಿ ವಂಚಿತ ಸಮುದಾಯಗಳಿಗೆ ನ್ಯಾಯ ಒದಗಿಸುವ ಮತ್ತು ಸಾಮಾಜಿಕ ಸೌಹಾರ್ದತೆಯನ್ನು ಕಾಪಾಡುವ ಸಾಧನ. ಇದನ್ನು ನಿರ್ಲಕ್ಷಿಸುವುದರಿಂದ ಸರ್ಕಾರದ ಸಿದ್ಧಾಂತ ಮತ್ತು ಕಾರ್ಯಕ್ಷಮತೆ ಎರಡೂ ಪ್ರಶ್ನಾರ್ಹವಾಗುತ್ತವೆ.

## ನ್ಯಾನೋ ಯೂರಿಯಾ ಬಳಕೆಯಿಂದಾಗುವ ಉಪಯೋಗಗಳ ಕುರಿತು ರೈತರಿಗೆ ಅರಿವು ಕಾರ್ಯಕ್ರಮ

# ನ್ಯಾನೋ ಯೂರಿಯಾ ಹೆಚ್ಚು ಪರಿಣಾಮಕಾರಿ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವ್ಯವಸಾಯದಲ್ಲಿ ರೈತರು ಹೆಚ್ಚು ಯೂರಿಯಾ ಬಳಕೆ ಮಾಡುತ್ತಿರುವುದರಿಂದ ಮಣ್ಣಿನ ಫಲವತ್ತತೆ ಕುಂಠಿತವಾಗಿ ಇಳುವರಿ ಕಡಿಮೆಯಾಗುತ್ತದೆ ಎಂದು ಹೊಸಪೇಟೆ ಉಪ ಕೃಷಿ ನಿರ್ದೇಶಕ ಡಾ. ನಹೀನ್ ಪಾಷ ತಿಳಿಸಿದರು.

ಬುಧವಾರ ತಾಲೂಕಿನ ಗೋವೇರಹಳ್ಳಿ ಗ್ರಾಮದಲ್ಲಿ ನ್ಯಾನೋ ಯೂರಿಯಾ ಬಳಕೆಯಿಂದಾಗುವ ಉಪಯೋಗಗಳ ಕುರಿತು ರೈತರಿಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಯೂರಿಯಾ ಬಳಕೆಯಿಂದ ಪರಿಸರದ ಮೇಲೆ ದುಷ್ಪರಿಣಾಮಗಳಾಗುತ್ತವೆ. ಬೆಳೆಗಳಿಗೆ ಸಾರಜನಕದ ರೂಪದಲ್ಲಿ ಉಪಯುಕ್ತ ಮೂಲವಾದರೂ, ಹೆಚ್ಚಿನ ಪ್ರಮಾಣದಲ್ಲಿ ಬಳಸುವುದರಿಂದ ಮಣ್ಣಿನಲ್ಲಿ ಆಮ್ಲೀಯತೆಯ ಪ್ರಮಾಣ ಹೆಚ್ಚಾಗಿ ಫಲವತ್ತತೆ ಕಳೆದುಕೊಳ್ಳುತ್ತದೆ. ಇದರಿಂದ ನೀರಿನ ಮಾಲಿನ್ಯ ಹಾಗೂ ಹಸಿರುಮನೆಗಳ ಪ್ರಮಾಣ ಏರಿಕೆಯಾಗಬಹುದು, ಪೋಷಕಾಂಶಗಳ ಅಸಮತೋಲನ ಉಂಟಾಗಬಹುದು ಎಂದರು.




ಯೂರಿಯಾದಲ್ಲಿ ಹೇರಳವಾದ ಸಾರಜನಕವಿರುವುದರಿಂದ ಸಸ್ಯಗಳಲ್ಲಿ ವಿಷಕಾರಕ ಪ್ರಮಾಣ ಹೆಚ್ಚಾಗಿ ಬೆಳೆಗಳಿಗೆ ಕೀಟ ಬಾಧೆ ಹೆಚ್ಚಾಗಿ ರೋಗಗಳಿಗೆ ದಾರಿ ಮಾಡಿಕೊಟ್ಟಂತಾಗುತ್ತದೆ. ಯೂರಿಯಾ ಬಳಕೆಯಿಂದ ಮಾನವನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತವೆ. ಇದರ ಬಳಕೆಯಿಂದ ಬೆಳೆದ ತರಕಾರಿಗಳು, ಹಣ್ಣುಗಳು ಮತ್ತು ಧಾನ್ಯಗಳಲ್ಲಿ ನೈಟ್ರೇಟ್ ಹಾಗೂ ನೈಟ್ರೈಟ್ ಅಂಶ ಹೆಚ್ಚಾಗುತ್ತದೆ. ಆಗ ಹೊಟ್ಟೆ ನೋವು, ವಾಂತಿ ಹಾಗೂ ಇತರೆ ಕಾಯಿಲೆಗಳು ಬರುತ್ತವೆ ಎಂದು ವಿವರಿಸಿದರು.

ಕೃಷಿ ಸಹಾಯಕ ನಿರ್ದೇಶಕ ವಿ.ಸಿ. ಉಮೇಶ್ ಮಾತನಾಡಿ, ಯೂರಿಯಾವನ್ನು ಹೇರಳವಾಗಿ ಬಳಕೆ ಮಾಡುವುದರಿಂದ ಮಣ್ಣಿನ ಪಿಹೆಚ್ ಸತ್ವವನ್ನು ಕಡಿಮೆಮಾಡಿ ಅದನ್ನು ಆಮ್ಲಿಯವಾಗಿ ಮಾರ್ಪಾಡುಗೊಳಿಸುತ್ತದೆ. ಆಗ ಸಸ್ಯಗಳಿಗೆ ಅಗತ್ಯವಿರುವ ಪೋಷಕಾಂಶಗಳ ಲಭ್ಯತೆಯನ್ನು ಕಡಿಮೆಗೊಳಿಸಿ ಉಪಯುಕ್ತ ಸೂಕ್ಷ್ಮ ಜೀವಿಗಳ ಕ್ರಿಯಾ ಚಟುವಟಿಕೆಗಳನ್ನು ಕುಂಠಿತಗೊಳಿಸುತ್ತದೆ. ಇದರಿಂದ ಒಟ್ಟು ಮಣ್ಣಿನ ಆರೋಗ್ಯ, ಪೋಷಕಾಂಶಗಳ ಅಸಮತೋಲನ ಮತ್ತು ಸಸ್ಯದ ಬೆಳವಣಿಗೆಯ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ರೈತರು ನ್ಯಾನೋ ಯೂರಿಯಾವನ್ನು ಬಳಕೆ ಮಾಡುವುದರಿಂದ ರಾಸಾಯನಿಕ ಬಳಕೆ ಕಡಿಮೆ ಮಾಡಿದಂತಾಗುತ್ತದೆ ಮತ್ತು ಬೆಳೆಗಳಲ್ಲಿ ಆದಾಯವನ್ನು ದ್ವಿಗುಣಗೊಳಿಸಿಕೊಳ್ಳಬಹುದಾಗಿದೆ. ಮಣ್ಣಿನ ಫಲವತ್ತತೆ ಸಮತೋಲನವನ್ನೂ ಕಾಯ್ದುಕೊಂಡಂತಾಗುತ್ತದೆ ಎಂದರು.

> ಸಾಂಪ್ರದಾಯಿಕ ಯೂರಿಯಾ ಬದಲಾಗಿ, ರೈತರು ತಮ್ಮ ಬೆಳೆಗಳಿಗೆ ನ್ಯಾನೋ ಯೂರಿಯಾ ಬಳಕೆ ಮಾಡಬೇಕು. ಇದು ದ್ರವ ರೂಪದ ರಸಗೊಬ್ಬರವಾಗಿದೆ. ಇದನ್ನು ಪ್ರತಿಷ್ಠಿತ ಇಫ್ಕೋ ಕಂಪನಿಯು ಉತ್ಪಾದನೆ ಮಾಡುತ್ತಿದೆ. ಇದು ಸಾಂಪ್ರದಾಯಿಕ ಯೂರಿಯಾ ಗೊಬ್ಬರಕ್ಕಿಂತ 8-10 ಪಟ್ಟು ಹೆಚ್ಚು ಪರಿಣಾಮಕಾರಿಯಾಗಿದೆ ಹಾಗೂ ಬೆಳೆಗಳಿಗೆ ಬೇಗನೆ ಉತ್ತಮವಾದ ಗುಣಮಟ್ಟದ ಪೋಷಕಾಂಶಗಳನ್ನು ನೀಡುತ್ತದೆ ಎಂದು ಡಾ. ನಹೀನ್ ಪಾಷ ತಿಳಿಸಿದರು.

ಎಡಿ ವಿ.ಸಿ. ಉಮೇಶ್, ಎ.ಕೆ. ಹಾಲಪ್ಪ, ಕೃಷಿ ಅಧಿಕಾರಿ ಸಂಘಪ್ಪ ಎಚ್.ಎಲ್, ರೈತ ಸಂಘದ ಮುಖಂಡ ಹನುಮಂತಪ್ಪ, ಕೆಂಚಪ್ಪ ಉಳ್ಳಳ್ಳಿ, ಇಫ್ಕೋ ಕಂಪನಿ ಪ್ರತಿನಿಧಿ ಗೋವಿಂದರಾಜು, ಕೃಷಿ ಪರಿಕರ ಸಂಘದ ಅಧ್ಯಕ್ಷ ನಾಗಲಿಂತಗ ಸ್ವಾಮಿ, ಸದಸ್ಯ ಜಯಂತ್ ಹಾಗೂ ಇತರರಿದ್ದರು.

# ಗ್ರಾಮೀಣ ಪ್ರತಿಭೆಗೆ 'ಯುವ ರತ್ನ' ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಬಾಗಳಿ ಗ್ರಾಮದ ಮಾಲತೇಶ್ ಮುದ್ದಜ್ಜಿಯು ಪ್ರಸ್ತುತ ಚಿತ್ರದುರ್ಗ ಜಿಲ್ಲೆಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಇವರ ಸಾಮಾಜಿಕ ಕಾರ್ಯಗಳನ್ನು ಗುರುತಿಸಿ ಜೀ ಕನ್ನಡ ನ್ಯೂಸ್ ಈಚೆಗೆ ಬೆಂಗಳೂರಿನಲ್ಲಿ 2025ನೇ ಸಾಲಿನ 'ಯುವ ರತ್ನ' ಪ್ರಶಸ್ತಿ ನೀಡಿ ಸನ್ಮಾನಿಸಿತು.

ಈ ಸಂದರ್ಭದಲ್ಲಿ ವಿಧಾನಸಭೆಯ ಸಭಾಪತಿ ಯು.ಟಿ. ಖಾದರ್, ಹಿರಿಯ ನಟಿ ಸುಧಾರಾಣಿ, ವಾಹಿನಿಯ ಮುಖ್ಯಸ್ಥ ರವಿ ಮುಂತಾದವರಿದ್ದರು. ಪ್ರಶಸ್ತಿ ಪುರಸ್ಕೃತ ಮಾಲತೇಶರಿಗೆ ಬಾಗಳಿ ಗ್ರಾಮಸ್ಥರು, ಸ್ನೇಹಿತರು ಮತ್ತು ತಾಲೂಕು ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದಾರೆ.

## ಜಿಲ್ಲಾಧಿಕಾರಿ ದಿವ್ಯ ಪ್ರಭು ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ಕೌಶಲ್ಯ ಸಮಿತಿ ಸಭೆ

# ವಾರದೊಳಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾ ಕೌಶಲ್ಯ ಮಿಷನ್‌ನ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಅಧ್ಯಕ್ಷತೆಯಲ್ಲಿ ಜುಲೈ 15ರ ಸಂಜೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ನೂತನ ಸಭಾಂಗಣದಲ್ಲಿ 2025-26ನೇ ಸಾಲಿನ ಜಿಲ್ಲಾ ಕೌಶಲ್ಯ ಸಮಿತಿಯ ಸಭೆ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿ ದಿವ್ಯ ಪ್ರಭು, ನಲ್ ಜಲ್ ಮಿತ್ರ ಯೋಜನೆ ಅಡಿ 146 ಗ್ರಾಮ ಪಂಚಾಯಿತಿಗಳಿಂದ ತಲಾ ಎರಡು ಜನರಂತೆ ಒಟ್ಟು 292 ಅಭ್ಯರ್ಥಿಗಳಿಗೆ ನೀರು ವಿತರಣಾ ನಿರ್ವಾಹಕ ತರಬೇತಿಯನ್ನು ಕೈಗೊಳ್ಳಲು ಒಂದು ವಾರದೊಳಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಂತೆ ಜಿ.ಪಂ ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನರಿಗೆ ನಿರ್ದೇಶಿಸಿದರು.

ಡೇ-ನಲ್ಮ ಯೋಜನೆಯಡಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬ ಸಮುದಾಯ ಸಂಘಟಕರು ಮತ್ತು ಸಮುದಾಯ ಸಂಘಟನಾಧಿಕಾರಿಗಳು ಸಿಆರ್‌ಪಿಗಳ ಸಹಾಯದೊಂದಿಗೆ ಜಿಲ್ಲೆಯಲ್ಲಿ ತಮಗೆ ಗುರಿ ನಿಗದಿಪಡಿಸಿದ ಸ್ತ್ರೀಶಕ್ತಿ ಸಂಘಗಳನ್ನು ರಚಿಸಿ, ಆಗಸ್ಟ್ ತಿಂಗಳ ಅಂತ್ಯದೊಳಗಾಗಿ ವರದಿ ಸಲ್ಲಿಸಬೇಕೆಂದು ಸೂಚಿಸಿದರು.



ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ರವೀಂದ್ರ ಪಿ.ದ್ಯಾಬೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಧಾರವಾಡ ಜಿಲ್ಲೆಯಲ್ಲಿ ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದ ಆಯೋಜಿಸಿಲಾಗುವ ನಲ್ ಜಲ್ ಮಿತ್ರ ಯೋಜನೆ, ಪ್ರಧಾನ ಮಂತ್ರಿ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆ, ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆ, ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆ ಹಾಗೂ ಯುವ ನಿಧಿ ಪ್ಲಸ್ ಯೋಜನೆಯ ಪ್ರಗತಿ ಮತ್ತು ಪ್ರಸಕ್ತ ಸಾಲಿಗೆ ಧಾರವಾಡ ಜಿಲ್ಲೆಯ 13 ಸರಕಾರಿ ತರಬೇತಿ ಸಂಸ್ಥೆಗಳಲ್ಲಿ ಆಗಿರುವ ಪ್ರವೇಶಾತಿಗಳ ವರದಿಯನ್ನು ವಿವರಿಸಿದರು.

ಸಭೆಯಲ್ಲಿ ಐಎಎಸ್ ಪ್ರೊಬೆಷನರಿ ಅಧಿಕಾರಿ ರಿತಿಕಾ ವರ್ಮಾ, ಜಿ.ಪಂ ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಲೀಡ್ ಡಿಸ್ಟ್ರಿಕ್ಟ್ ಮ್ಯಾನೇಜರ್ ಬಸವರಾಜ ಗಡಾದ, ಕಾರ್ಖಾನೆ ಮತ್ತು ಬಾಯ್ಲರ್‌ಗಳ ಇಲಾಖೆ ಜಂಟಿ ನಿರ್ದೇಶಕ ಆನಂದ ರಾಠೋಡ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

> ನಿರ್ಗತಿಕರ ವಸತಿ ಕೇಂದ್ರಗಳಿಗೆ ಕಾಲಕಾಲಕ್ಕೆ ಭೇಟಿ ನೀಡಿ, ಸುಸ್ಥಿತಿಯಲ್ಲಿಡಲು ಕ್ರಮ ಜರುಗಿಸಬೇಕು. ಮಹಿಳೆಯರ ಸಬಲೀಕರಣಕ್ಕಾಗಿ ಸ್ತ್ರೀಶಕ್ತಿ ಸಂಘಗಳು ಸ್ವಾವಲಂಬಿ ಬದುಕು ನಿರ್ಮಿಸಲು ಈಗಾಗಲೇ ಧಾರವಾಡ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಅಕ್ಕ ಕೆಫೆಯನ್ನು ಪ್ರಾರಂಭಿಸಿದ್ದು, ಅದೇ ರೀತಿ ಹುಬ್ಬಳ್ಳಿ ನಗರದಲ್ಲಿ ಅಕ್ಕ ಕೆಫೆಯನ್ನು ನಿರ್ಮಿಸಲು ಸ್ಥಳ ಗುರುತಿಸಬೇಕೆಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಿಗೆ ಜಿಲ್ಲಾಧಿಕಾರಿಗಳು ತಿಳಿಸಿದರು.

# ಕನಸಾಗಿಯೇ ಉಳಿದ ಯಲವಿಗಿ-ಕುಷ್ಟಗಿ ರೈಲು ಸಂಪರ್ಕ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ತಾವು ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಆಯ್ಕೆಯಾಗಿ ಬಂದ ತಕ್ಷಣ ಯಲವಿಗಿ-ಕುಷ್ಟಗಿ ರೈಲು ಸಂಪರ್ಕಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಸಂಸದ ಬಸವರಾಜ ಬೊಮ್ಮಾಯಿ ಹೇಳಿಕೆ ನೀಡಿ ವರ್ಷವೇ ಕಳೆಯಿತು. ಅವರು ಸಂಸದರಾಗಿ ಆಯ್ಕೆಯೂ ಆದರು. ಆದರೆ ಈವರೆಗೂ ನರೇಗಲ್ಲ ಹೋಬಳಿಯ ಮತದಾರರಿಗೆ ಅವರ ದರ್ಶನವೇ ಆಗಿಲ್ಲವೆನ್ನುವುದು ಮತದಾರರ ಅಳಲಾಗಿದೆ. ತಾವು ಹೇಳಿದಂತೆ ಆರಿಸಿ ಬಂದ ತಕ್ಷಣ ಯಲವಿಗಿ-ಕುಷ್ಟಗಿ ರೈಲು ಮಾರ್ಗ ಜೋಡಣೆಗೆ ಅವರು ನಡೆಸಿರುವ ಪ್ರಯತ್ನವಾದರೂ ಏನು ಎಂಬುದು ಮತದಾರರ ಪ್ರಶ್ನೆ.

ಈ ಕುರಿತು ಮಾತನಾಡಿದ ರೈಲು ಹೋರಾಟ ಸಮಿತಿ ಸದಸ್ಯ ಡಾ. ಆರ್.ಕೆ. ಗಚ್ಚಿನಮಠ, ಆಗಿನ ರೇಲ್ವೆ ಮಂತ್ರಿ ಲಾಲಬಹದ್ದೂರ ಶಾಸ್ತ್ರಿಯವರು ಗದಗ-ವಾಡಿ ರೈಲು ಮಾರ್ಗಕ್ಕೆ ಅನುಮತಿಸಿ ಶಂಕು ಸ್ಥಾಪನೆ ನೆರವೇರಿಸಿದ್ದರು. ಈ ಮಾರ್ಗವು ಗದಗ-ಕಣಗಿನಹಾಳ-ಕೋಟುಮಚಗಿ-ನರೇಗಲ್ಲ-ಗಜೇಂದ್ರಗಡ-ಹನುಮಸಾಗರ ಮಾರ್ಗವಾಗಿ ಸಾಗುತ್ತದೆಂದು ನಾವೆಲ್ಲರೂ ಕನಸು ಕಂಡಿದ್ದೆವು. ಆದರೆ ಈ ಯೋಜನೆ ಜಾರಿಗೆ ಬಾರದಿರುವುದು ನಮಗೆಲ್ಲರಿಗೂ ತುಂಬಾ ನಿರಾಸೆಯಾಗಿದೆ ಎಂದಿದ್ದಾರೆ.

ರೈಲು ಹೋರಾಟ ಸಮಿತಿ ಸದಸ್ಯ ಅಶೋಕ ಬೇವಿನಕಟ್ಟಿ ಈ ಬಗ್ಗೆ ಪ್ರತಿಕ್ರಿಯಿಸಿ, ಆಗಿನ ಸಂಸದರಾಗಿದ್ದ ಶಿವಕುಮಾರ ಉದಾಸಿಯವರು ಈ ಕುರಿತು ಈ ಭಾಗದ ಜನರ ಮೂಗಿಗೆ ತುಪ್ಪ ಹಚ್ಚಿ ತಮ್ಮ ಅವಧಿಯನ್ನು ಮುಗಿಸಿದರೇ ಹೊರತು, ಅನುಷ್ಠಾನಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಲಿಲ್ಲ. ಈಗಿನ ಸಂಸದರಾದರೂ ನಮಗೆ ನ್ಯಾಯ ಒದಗಿಸಿಕೊಡುತ್ತಾರೆಂದು ಕಾಯುತ್ತಿದ್ದೇವೆ. ಚುನಾವಣೆ ಮುಗಿದ ನಂತರ ಅವರ ಭೇಟಿ ಈವರೆಗೂ ನಮಗಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

# ನ್ಯಾನೋ ಯೂರಿಯಾ ಸಿಂಪರಣೆ ಪ್ರಾತ್ಯಕ್ಷಿಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಟ್ಟೂರ ಗ್ರಾಮದ ಬಸಪ್ಪ ಸಾವಿರಕುರಿ ಇವರ ಹೊಲದಲ್ಲಿ ಬುಧವಾರ ಗೋವಿನಜೋಳ ಬೆಳೆಯಲ್ಲಿ ಡ್ರೋನ್ ಮೂಲಕ ನ್ಯಾನೋ ಯೂರಿಯಾ ಸಿಂಪರಣೆ ಪ್ರಾತ್ಯಕ್ಷಿಕೆಯನ್ನು ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್ ನೇತೃತ್ವದಲ್ಲಿ ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್. ಮಾತನಾಡಿ, ಜೂನ್ ತಿಂಗಳಿನಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾದ ಬಗ್ಗೆ ವರದಿಯಾಗಿದ್ದು, ಭೂಮಿಯಲ್ಲಿ ತೇವಾಂಶ ಹೆಚ್ಚಾಗಿದೆ. ಗೋವಿನಜೋಳ, ಶೇಂಗಾ, ತೊಗರಿ ಹಾಗೂ ಇತರೆ ಬೆಳೆಗಳಿಗೆ ರೈತರು ಯೂರಿಯಾ ಗೊಬ್ಬರವನ್ನು ಮೇಲು ಗೊಬ್ಬರವಾಗಿ ಬಳಸುತ್ತಿದ್ದಾರೆ. ಇದರ ಬದಲಾಗಿ ಒಂದು ಎಕರೆ ಬೆಳೆಗೆ ಸುಮಾರು 500 ಮಿ.ಲೀ. ನ್ಯಾನೋ ಯೂರಿಯಾ ಬಳಸುವದರಿಂದ ಉತ್ತಮ ಫಲಿತಾಂಶದ ಜೊತೆಗೆ ಆರ್ಥಿಕವಾಗಿಯೂ ಉಳಿತಾಯವಾಗಲಿದೆ.

ಬಟ್ಟೂರು ಗ್ರಾಮದ ಸುಮಾರು 500ಕ್ಕೂ ಅಧಿಕ ಎಕರೆ ಭೂಮಿಯಲ್ಲಿ ನ್ಯಾನೋ ಯೂರಿಯಾ ಸಿಂಪರಣೆ ಮಾಡಲಾಗಿದ್ದು, ಎಲ್ಲೆಡೆ ಉತ್ತಮ ಫಲಿತಾಂಶ ಬಂದಿದೆ. ನ್ಯಾನೋ ಯೂರಿಯಾ ಗೊಬ್ಬರ ನುರಿತ ತಜ್ಞರು, ವಿಜ್ಞಾನಿಗಳ ಸಂಶೋಧನೆಯಿಂದ ತಯಾರಿಸಲ್ಪಟ್ಟಿದೆ. ಬೆಳೆಗಳಿಗೆ ಅತ್ಯಂತ ಉಪಯುಕ್ತವಾಗಿದೆ. ಅದರಲ್ಲೂ ಡ್ರೋನ್ ಮೂಲಕ ಯೂರಿಯಾ ಸಿಂಪರಣೆ ಹೆಚ್ಚು ಫಲದಾಯಕವಾಗುತ್ತದೆ. ರೈತರು ಹೊಸ ಹೊಸ ತಂತ್ರಜ್ಞಾನಗಳನ್ನು ಬಳಸುವ ಮೂಲಕ ಕೃಷಿಯಲ್ಲಿ ಹೆಚ್ಚು ಇಳುವರಿ ಪಡೆಯುವ ನಿಟ್ಟಿನಲ್ಲಿ ಯೋಚಿಸಬೇಕು ಎಂದು ಹೇಳಿದರು.

ತಾಲೂಕು ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಮನಗೂಳಿ ಮಾತನಾಡಿ, ಯೂರಿಯಾ ಸಸ್ಯಗಳಿಗೆ ಸಾರಜನಕವನ್ನು ಒದಗಿಸಲು ಬಳಸುವ ದ್ರವರೂಪದ ರಸಗೊಬ್ಬವಾಗಿದೆ. ಇದನ್ನು ನ್ಯಾನೋ ತಂತ್ರಜ್ಞಾನವನ್ನು ಆಧರಿಸಿ ಅಭಿವೃದ್ಧಿಪಡಿಸಲಾಗಿದೆ. ಸಾಂಪ್ರದಾಯಿಕ ಯೂರಿಯಾಕ್ಕೆ ಪರಿಸರ ಸ್ನೇಹಿ ಪರ್ಯಾಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಸಹಾಯಕ ಕೃಷಿ ಅಧಿಕಾರಿ ಪಿ.ಕೆ. ಹೊನ್ನಪ್ಪನವರ, ದೇವರಾಜ ಅಚಲಕರ, ಮಹೇಶ ನಂದೆಣ್ಣವರ, ಹರೀಶ ಭದ್ರಾಪೂರ, ಜಗದೀಶಗೌಡ ಪಾಟೀಲ, ರಾಜಣ್ಣ ಹೊಳಲಾಪೂರ, ಪರಸಪ್ಪ ಇಮ್ಮಡಿ, ಪಿಡಿಒ ಮಾದರ್, ಗ್ರಾಮದ ರೈತರು ಹಾಜರಿದ್ದರು.

## ಜ. ತೋಂಟದಾರ್ಯ ಸಿಬಿಎಸ್‌ಇ ಶಾಲೆಯ ಸಂಸತ್ತು ರಚನೆ ಸಮಾರಂಭದಲ್ಲಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ್

# ಉತ್ತಮ ನಾಗರಿಕರಾಗಿ ಸಾಧನೆ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಕಠಿಣ ಪರಿಶ್ರಮದಿಂದ ವಿದ್ಯಾರ್ಜನೆ ಮಾಡಿ ಉತ್ತಮ ಅಂಕಗಳೊಂದಿಗೆ ಫಲಿತಾಂಶ ಪಡೆದು ಶಾಲೆಗೆ ಮತ್ತು ಪಾಲಕರಿಗೆ ಕೀರ್ತಿ ತರಬೇಕು. ಭವಿಷ್ಯದಲ್ಲಿ ಉತ್ತಮ ನಾಗರಿಕರಾಗಿ ಸಮಾಜದಲ್ಲಿ ಉನ್ನತ ಸಾಧನೆ ಮಾಡಬೇಕು. ಬಸವಣ್ಣನವರು ಜ್ಞಾನದ ಮಹತ್ವವನ್ನು ತಮ್ಮ ವಚನಗಳಲ್ಲಿ ಒತ್ತಿ ಹೇಳಿದ್ದಾರೆ. ಅವರ ಪ್ರಕಾರ, ಜ್ಞಾನವು ಅಜ್ಞಾನವನ್ನು ನಿವಾರಿಸುತ್ತದೆ ಮತ್ತು ಸತ್ಯದ ದಾರಿಯನ್ನು ತೋರಿಸುತ್ತದೆ ಎಂದು ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ್ ಹೇಳಿದರು.

ಜಗದ್ಗುರು ತೋಂಟದಾರ್ಯ ಸಿಬಿಎಸ್‌ಇ ಶಾಲೆಯಲ್ಲಿ ನಡೆದ ಶಾಲಾ ಸಂಸತ್ತು ರಚನೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.



ಜ್ಞಾನವು ಕೇವಲ ಪುಸ್ತಕಗಳಲ್ಲಿರುವುದಲ್ಲ, ಅದು ಅನುಭವ ಮತ್ತು ಆಚರಣೆಯಿಂದ ಬರುತ್ತದೆ. ಜ್ಞಾನವು ಅಜ್ಞಾನವನ್ನು ನಾಶಪಡಿಸುತ್ತದೆ ಮತ್ತು ಸತ್ಯವನ್ನು ಅರಿತುಕೊಳ್ಳಲು ಸಹಾಯ ಮಾಡುತ್ತದೆ. ಜ್ಞಾನವು ಸತ್ಯದ ದಾರಿಯನ್ನು ತೋರಿಸುತ್ತದೆ. ಆಧ್ಯಾತ್ಮಿಕ ಜ್ಞಾನವು ವ್ಯಕ್ತಿಯನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುತ್ತದೆ. ಅನುಭಾವಿಗಳ ಒಡನಾಟದಿಂದ ಜ್ಞಾನವನ್ನು ಪಡೆಯಬಹುದು ಎಂದು ಹೇಳಿದರು.

> ಗದುಗಿನ ಎನ್.ಸಿ.ಸಿ ಕಮಾಂಡಿಂಗ್ ಆಫೀಸರ್ ಕರ್ನಲ್ ಭುವನ್ ಖಾರೆ ಮಾತನಾಡಿ, ಸೇನೆಯಲ್ಲಿ ವಿಫುಲ ಉದ್ಯೋಗಾವಕಾಶಗಳಿದ್ದು, ಅದರ ಕಡೆಗೆ ಗಮನ ಹರಿಸಬೇಕು. ಸೇನೆಯಲ್ಲಿ ಹೆಣ್ಣುಮಕ್ಕಳಿಗೆ ವಿಶೇಷ ಆದ್ಯತೆ ಕಲ್ಪಿಸಲಾಗಿದೆ. ದೇಶದ ರಾಜಕೀಯ ವ್ಯವಸ್ಥೆ, ಚುನಾವಣೆ ಪ್ರಕ್ರಿಯೆಗಳ ಕುರಿತು ತಿಳಿದುಕೊಳ್ಳಲು ಶಾಲಾ ಸಂಸತ್ತು ಚುನಾವಣೆಗಳು ವಿದ್ಯಾರ್ಥಿಗಳಿಗೆ ಸಹಕಾರಿಯಾಗಲಿದೆ. ವಿದ್ಯಾರ್ಥಿಗಳು ದೇಶಭಕ್ತಿ, ದೇಶಪ್ರೇಮ, ಅಭಿಮಾನ ಇಟ್ಟುಕೊಳ್ಳಬೇಕು ಎಂದು ಹೇಳಿದರು.

ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ. ಎಮ್. ಎಮ್. ಆವಟಿ ಮಾತನಾಡಿ, ಕಲಿಕೆ ನಿರಂತರ ಪ್ರಕ್ರಿಯೆಯಾಗಿರುವುದರಿಂದ ವಿದ್ಯಾರ್ಥಿಗಳು ತಮ್ಮ ಜೀವನದುದ್ದಕ್ಕೂ ಅಧ್ಯಯನದ ಜೊತೆಯಲ್ಲಿ ಕೌಶಲ್ಯಯುತ ತರಬೇತಿ ಶಿಕ್ಷಣ ಪಡೆದುಕೊಳ್ಳಬೇಕು ಎಂದು ಹೇಳಿದರು.

ತೋಂಟದಾರ್ಯ ಸಿಬಿಎಸ್‌ಇ ಶಾಲೆಯ ಪ್ರಾಂಶುಪಾಲ ವಿಜಯಕುಮಾರ್ ಎಸ್.ಮಾಲಗತ್ತಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಪೂಜಾ ಶಿರೂರ, ಕಲ್ಲಪ್ಪ ಅಂಗಡಿ, ಮಂಜುನಾಥ ಅಸುಂಡಿ, ವೀರೇಶ್, ರಿಯಾನ್ ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಎಐಸಿಸಿ ಒಬಿಸಿ ಸಲಹಾ ಮಂಡಳಿ ಸಭೆ: ಮೂರು ಪ್ರಮುಖ ನಿರ್ಣಯಗಳ ಅಂಗೀಕಾರ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನಲ್ಲಿ ಎರಡು ದಿನಗಳ ಕಾಲ ನಡೆದ ಎಐಸಿಸಿ ಒಬಿಸಿ ಸಲಹಾ ಮಂಡಳಿಯ ಮೊದಲ ಸಭೆಯಲ್ಲಿ ಮೂರು ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಗಿದೆ.

ನಗರದ ಶಾಂಗ್ರಿಲಾ ಹೋಟೆಲ್‌ನಲ್ಲಿ ಬುಧವಾರ ನಡೆದ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಂಡಳಿಯ ಸದಸ್ಯರಾದ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಣಯಗಳನ್ನು ಪ್ರಕಟಿಸಿದರು.

ಅವುಗಳು ಹೀಗಿವೆ ಭಾರತೀಯ ಜನಗಣತಿ ಆಯೋಗದಿಂದ ರಾಷ್ಟ್ರೀಯ ಮಟ್ಟದ ಜಾತಿ ಜನಗಣತಿ ನಡೆಯಬೇಕು. ಈ ಜನಗಣತಿಯು ಪ್ರತಿಯೊಬ್ಬ ವ್ಯಕ್ತಿ ಮತ್ತು ಜಾತಿಗಳ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ಉದ್ಯೋಗ ಮತ್ತು ರಾಜಕೀಯ ಅಂಶಗಳನ್ನು ಒಳಗೊಂಡಿರಬೇಕು. ಇದಕ್ಕೆ ತೆಲಂಗಾಣ ಮಾದರಿಯನ್ನು ಅನುಸರಿಸಬೇಕು.

ಮೀಸಲಾತಿ ಮಿತಿ ಶೇಕಡ 50 ಅನ್ನು ತೆಗೆದು ಹಾಕಬೇಕು. ಈ ಮೂಲಕ ಶಿಕ್ಷಣ, ಸೇವೆ, ರಾಜಕೀಯ ಮತ್ತು ಇತರ ಕ್ಷೇತ್ರಗಳಲ್ಲಿ ಒಬಿಸಿಗಳಿಗೆ ಸೂಕ್ತ ಮೀಸಲಾತಿಯನ್ನು ಒದಗಿಸಬೇಕು.

## ಸಮಾಜದ ಸರ್ವರೂ ಪಾಲ್ಗೊಳ್ಳಿ

▶▶ ಮೊದಲನೇ ಪುಟದಿಂದ

ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ, ವಿಧಾನ ಪರಿಷತ್ ಮಾಜಿ ಸದಸ್ಯ ಡಾ. ಎ.ಎಚ್. ಶಿವಯೋಗಿಸ್ವಾಮಿ, ಜಿ.ಪಂ ಮಾಜಿ ಸದಸ್ಯ ಬಿ.ಎಂ. ವಾಗೀಶಸ್ವಾಮಿ ಭಾಗವಹಿಸಲಿದ್ದಾರೆ. ಈ ಎರಡು ದಿನಗಳ ಕಾರ್ಯಕ್ರಮದ ನೇತೃತ್ವವನ್ನು ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮೀಜಿ ವಹಿಸಲಿದ್ದಾರೆ. ಸಮಾಜದ ಅನೇಕ ಶಿವಾಚಾರ್ಯರು, ಹಿರಿಯ ಮುಖಂಡರು, ಪ್ರಮುಖರು ಆಗಮಿಸಲಿದ್ದು, ಭಕ್ತರು, ಸಮಾಜದ ಸರ್ವರೂ ಈ ಸಭೆಯಲ್ಲಿ ಭಾಗವಹಿಸುವಂತೆ ಮುಕ್ತಿಮಂದಿರ ಶ್ರೀಗಳು ತಿಳಿಸಿದ್ದಾರೆ.

## ಹಾರ್ಟ್ ಅಟ್ಯಾಕ್‌ಗೆ 26ರ ಯುವತಿ ಬಲಿ!

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಹೃದಯಾಘಾತದಿಂದ 26 ವರ್ಷದ ಯುವತಿ ಸಾವನ್ನಪ್ಪಿರುವ ಘಟನೆ ಕೊಪ್ಪಳದಲ್ಲಿ ಜರುಗಿದೆ.

26 ವರ್ಷದ ಮಂಜುಳಾ ಹೂಗಾರ್ ಮೃತ ಯುವತಿ. ಇವರು ಕೊಪ್ಪಳದ ಶಿವಗಂಗಾ ಲೇಔಟ್ ನಿವಾಸಿ ಎನ್ನಲಾಗಿದೆ.

ಮಧ್ಯಾಹ್ನ ಮಂಜುಳಾಗೆ ಲೋ ಬಿಪಿಯಾಗಿತ್ತು. ಕೂಡಲೇ ಆಕೆಯನ್ನು ಸ್ಥಳೀಯ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಮಾರ್ಗ ಮಧ್ಯೆ ಸಾವನ್ನಪ್ಪಿದ್ದಳು. ಆಸ್ಪತ್ರೆಯಲ್ಲಿ ವೈದ್ಯರು ಪರಿಶೀಲಿಸಿ ಹೃದಯಾಘಾತದಿಂದ ಮೃತಪಟ್ಟಿರುವುದಾಗಿ ಖಚಿತಪಡಿಸಿದ್ದಾರೆ.

ಯುವತಿ ಸಾವಿನಿಂದ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

### ಶರಣ ಸಾಹಿತ್ಯ ಪರಿಷತ್ತು, ಕದಳಿ ವೇದಿಕೆಯಿಂದ ಡಾ. ಫ.ಗು. ಹಳಕಟ್ಟಿಯವರ ಜಯಂತಿ, ದತ್ತಿ ಉಪನ್ಯಾಸ

## ನೆಲದ ಭಾವನೆಗಳನ್ನು ಕಟ್ಟಿಕೊಟ್ಟವರು ಶರಣರು

■ ವಿಜಯಸಾಕ್ಷಿ ಸುದ್ದಿ, ಗದಗ

ವಚನ ಸಾಹಿತ್ಯ ಅದೊಂದು ಬೆಳಕು. ಜಗತ್ತಿಗೆ ಹೊಸ ಮಾರ್ಗವನ್ನು, ಸಮ ಸಮಾಜವನ್ನು ಹುಟ್ಟು ಹಾಕುವಲ್ಲಿ ಬಸವಾದಿ ಶರಣರು ನಡೆಸಿದ ಚಳುವಳಿ ಎಲ್ಲರಿಗೂ ದಾರಿದೀಪಗಳಾಗಿವೆ. ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎನ್ನುವ ಧ್ಯೇಯದಂತೆ ನಡೆದವರು 12ನೇ ಶತಮಾನದ ಶರಣರೆಂದು ಪ್ರೊ. ಎನ್. ಎಂ. ಪವಾಡಿಗೌಡ್ರ ಹೇಳಿದರು.

ಅವರು ತಾಲೂಕಾ ಶರಣ ಸಾಹಿತ್ಯ ಪರಿಷತ್ತು ಮತ್ತು ತಾಲೂಕಾ ಕದಳಿ ಮಹಿಳಾ ವೇದಿಕೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಶ್ರೀ ತೋಂಟದಾರ್ಯ ಮಠದ ಆವರಣದ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯದಲ್ಲಿ ಜರುಗಿದ ವಚನ ಸಂಶೋಧನಾ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ 145ನೇ ಜಯಂತಿ ಹಾಗೂ ಶ್ರೀ ಬಸವರಾಜ ಅಂಗಡಿಯವರ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ 'ಬಸವಾದಿ ಶಿವಶರಣರ ಸಾಹಿತ್ಯ ಪ್ರಸಾರ, ಮುದ್ರಣ ಸೇವೆ' ಎಂಬ ವಿಷಯದ ಕುರಿತು ಮಾತನಾಡುತ್ತಿದ್ದರು.



ಅಧ್ಯಕ್ಷತೆ ವಹಿಸಿದ್ದ ಪ್ರಕಾಶ ಟಿ.ಅಸುಂಡಿ ಮಾತನಾಡಿ, 12ನೇ ಶತಮಾನದ ಶರಣರು ವಚನಗಳನ್ನು ಬರೆದರು. ಆದರೆ ಅವು ಮಠ, ಮಂದಿರ, ಮನೆಗಳಲ್ಲಿ ಪೂಜೆಗೊಳ್ಳುತ್ತ, ಕೊನೆಗೆ ಜೀರ್ಣಗೊಂಡು ಹಾಳಾಗುವ ಸಂದರ್ಭ ಇತ್ತು. ಇಂಥ ಸಂದರ್ಭದಲ್ಲಿ ವಕೀಲರಾದ ಫ.ಗು. ಹಳ್ಳಕಟ್ಟಿಯವರು ತಮ್ಮ ಕಕ್ಷಿದಾರರ ಮನೆಗೆ ಹೋದಾಗ ಆ ಅಪೂರ್ವ ಸಂಪತ್ತನ್ನು ಕಂಡು ಅವರ ಮನವೊಲಿಸಿ ಆ ವಚನ ಕಟ್ಟುಗಳನ್ನು ತಂದು ಸಂರಕ್ಷಿಸಿ, ಕೊನೆಗೆ ಮನೆ ಮಾರಿ ವಚನಗಳನ್ನು ಅಚ್ಚು ಹಾಕಿಸಿ ವಚನ ಸಾಹಿತ್ಯವೆಂಬ ಸಂಪತ್ತನ್ನು ಈ ಜಗದ ಕಣ್ಣಿಗೆ ತಂದರು ಎಂದು ಸ್ಮರಿಸಿದರು.

ಜಯಶ್ರೀ ಬಿ.ಪಟ್ಟಣಶೆಟ್ಟಿ ಬಸವರಾಜ ಅಯ್ಯಪ್ಪ ಅಂಗಡಿಯವರ ಕುರಿತು ಮಾತನಾಡುತ್ತ, ಗದುಗಿಗೆ ಮೊದಲು ಲ್ಯಾಮಿನೇಶನ್, ಸ್ಪರ್ಧಾ ಕೈಪಿಡಿಗಳನ್ನು ತಂದವರು ನಮ್ಮ ತಂದೆಯವರು. ಅವರು ವ್ಯಕ್ತಿ ಆಗಿರಲಿಲ್ಲ ಶಕ್ತಿಯಾಗಿದ್ದರು ಎಂದು ಸ್ಮರಿಸಿದರು.

ಇದೇ ಸಂದರ್ಭದಲ್ಲಿ ಶ್ರೀ ಸುರೇಶ ಬಿ.ಅಂಗಡಿಯವರು ತಮ್ಮ ತಂದೆಯವರ ಪರಿಶ್ರಮದ ಕುರಿತು ಮಾತನಾಡಿದರು. ಪ್ರೊ. ಎಂ.ಯು. ಹಿರೇಮಠ, ಅತಿಥಿಗಳಾಗಿ ಆಗಮಿಸಿದ್ದ ಬಸವದಳದ ಅಧ್ಯಕ್ಷರಾದ ವಿ.ಕೆ. ಕರಿಗೌಡ್ರ ಮಾತನಾಡಿದರು.

ಶರಣೆ ಗಂಗಮ್ಮ ಹೂಗಾರ ಪ್ರಾರ್ಥಿಸಿದರು. ಶರಣೆ ಜ್ಯೋತಿ ಹೆರಲಗಿ ಸ್ವಾಗತಿಸಿದರು. ಪ್ರೊ. ಸಿದ್ಧಲಿಂಗೇಶ ಎ.ಸಜ್ಜನಶೆಟ್ಟರ ನಿರೂಪಿಸಿದರು. ಎಂ.ಬಿ. ಲಿಂಗದಾಳ ವಂದಿಸಿದರು. ಕೊನೆಗೆ ವಚನ ಮಂಗಲದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

ಕಾರ್ಯಕ್ರಮದಲ್ಲಿ ಶರಣ ಎಸ್.ಬಿ. ಮೆಣಸಗಿ, ಪಿ.ಟಿ. ನಾರಾಯಣಪೂರ, ಬೂದಪ್ಪ ಅಂಗಡಿ, ಜೆ.ಪಿ. ಕಟ್ಟಿಮನಿ, ವಿ.ಎಸ್. ಉಪ್ಪಿನ, ಬಸವರಾಜ ವಾರಿ, ಈರಣ್ಣ ಬಡಿಗಣ್ಣನವರ, ಮಲ್ಲಿಕಾರ್ಜುನ ವಾರದ, ಎಚ್.ಬಿ. ತೋಟದ, ಪಟ್ಟಣಶೆಟ್ಟಿ, ಕಾಡಪ್ಪನವರ, ಶರಣೆಯರಾದ ಮಂಜುಳಾ ಹಾಸಿಲಕರ, ರೇಣುಕಾ ಹಾಸಿಲಕರ, ಶ್ರೀಮತಿ ವಾರದ, ಗಿರಿಜಾ ಹಿರೇಮಠ, ಸಹನಾ ಆಲತಗಿ ಮುಂತಾದವರು ಪಾಲ್ಗೊಂಡಿದ್ದರು.

## ಜೆಡಿಎಸ್‌ನ ದೇವಪ್ಪ ಮಲ್ಲಸಮುದ್ರರ ಜನ್ಮದಿನ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜೆಡಿಎಸ್ ಪಕ್ಷದ ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ದೇವಪ್ಪ ಮಲ್ಲಸಮುದ್ರ ಇವರ ಜನ್ಮದಿನವನ್ನು ಬಿಂಕದಕಟ್ಟಿ ಗ್ರಾಮದ ಸಾಲುಮರದ ತಿಮ್ಮಕ್ಕ ಉದ್ಯಾನವನದಲ್ಲಿ ಗದಗ ಜಿಲ್ಲಾಧ್ಯಕ್ಷ ಎಂ.ವಾಯ್. ಮುಧೋಳರ ನೇತೃತ್ವದಲ್ಲಿ ಆಚರಿಸಲಾಯಿತು.

ಪಕ್ಷದ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಕೊಪ್ಪಳ, ಹಿಂದುಳಿದ ವರ್ಗಗಳ ಅಧ್ಯಕ್ಷ ತಿಪ್ಪಣ್ಣ ಹುಡೇದ, ರೈತ ಘಟಕದ ಅಧ್ಯಕ್ಷ ಲಕ್ಷ್ಮಣ ನಾಯಕ, ಅಲ್ಪಸಂಖ್ಯಾತರ ಘಟಕದ ಕಾರ್ಯಾಧ್ಯಕ್ಷ ಶಿರಾಜ್ ಕದಡಿ, ತಾಲೂಕಾಧ್ಯಕ್ಷ ಅಬ್ದುಲರಸೂಲ ಬಳ್ಳಾರಿ, ಉಪಾಧ್ಯಕ್ಷ ರಾಜೇಸಾಬ ತಹಸೀಲ್ದಾರ, ಗಜೇಂದ್ರಗಡ ತಾಲೂಕಾಧ್ಯಕ್ಷ ಸಂಗಪ್ಪ ಎಲಬುಣಸಿ, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಬಾದಶಾಹ ಭಗವಾನ, ಮುಖಂಡರಾದ ಎಂ.ಎಸ್. ಪರ್ವತಗೌಡ್ರ, ಇಮಾಮಹುಸೇನ ಉಮಚಗಿ, ಆನಂದ ಹುಂಡಿ, ಅಲ್ತಾಫ್ ಖಾಜಿ, ಶ್ರೀನಿವಾಸ ಓಂಕಾರ ಸೇರಿದಂತೆ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಆರೋಗ್ಯಕರ ಆಹಾರದಿಂದ ರೋಗ ಮುಕ್ತಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಊಟ ಬಲ್ಲವನಿಗೆ ರೋಗವಿಲ್ಲ, ಮಾತು ಬಲ್ಲವನಿಗೆ ಜಗಳವಿಲ್ಲ ಎಂಬ ಗಾದೆ ಮಾತಿನಂತೆ ಏನು ತಿನ್ನಬೇಕು, ಯಾವಾಗ ತಿನ್ನಬೇಕು, ತಿನ್ನುವ ಆಹಾರ ಹೇಗಿರಬೇಕು ಎಂಬುದನ್ನು ನಾವು ಚೆನ್ನಾಗಿ ಅರಿತಿದ್ದರೆ ಆರೋಗ್ಯ ಉತ್ತಮವಾಗಿರುತ್ತದೆ. ಆರೋಗ್ಯಕರವಾದ ಡಯಟ್ ಎಂದಾಕ್ಷಣ ಕಡಿಮೆ ತಿನ್ನುವುದು ಎಂದಲ್ಲ. ಒಳ್ಳೆಯ ಆಹಾರವನ್ನು, ದೇಹಕ್ಕೆ ಶಕ್ತಿ ನೀಡುವ ವಿವಿಧ ಪೋಷಕಾಂಶಗಳಿರುವ ಆರೋಗ್ಯಕರವಾದ ಆಹಾರವನ್ನು ತಿನ್ನುವುದರ ಮೂಲಕ ರೋಗಗಳಿಂದ ನಮ್ಮನ್ನು ರಕ್ಷಿಸಿಕೊಳ್ಳಬಹುದು ಎಂದು ಕ್ಷೇತ್ರ ಯೋಜನಾಧಿಕಾರಿ ವಿಶಾಲಾ ಮಲ್ಲಾಪುರ ಹೇಳಿದರು.

ಡಂಬಳ ಹೋಬಳಿಯ ಕದಾಂಪುರ ಗ್ರಾಮದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ ವತಿಯಿಂದ ಮಹಿಳಾ ಜ್ಞಾನ ವಿಕಾಸ್ ಕಾರ್ಯಕ್ರಮದಡಿ ಪೌಷ್ಟಿಕ ಆಹಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಆರೋಗ್ಯಾಧಿಕಾರಿ ಮಂಜುಳಾ ಸಜ್ಜನರ ಮಾತನಾಡಿ, ಪೌಷ್ಟಿಕ ಆಹಾರದ ಬಳಕೆ ಮತ್ತು ಅದರ ಮಹತ್ವದ ಕುರಿತು, ತರಕಾರಿ ಸೊಪ್ಪು, ಮೊಳಕೆ ಬರಿಸಿದ ಕಾಳುಗಳ ಸೇವನೆಯ ಪ್ರಯೋಜನಗಳನ್ನು ತಿಳಿಸಿಕೊಟ್ಟರು.

ವೈದ್ಯಾಧಿಕಾರಿಗಳಾದ ಡಾ. ತಸ್ಮಿಯಾ ಮಾತನಾಡಿ, ಹೆಣ್ಣಿಗೆ ತನ್ನ ಬಾಲ್ಯದಲ್ಲಿ, ಯೌವನದಲ್ಲಿ, ಹೆರಿಗೆಯ ನಂತರ, ಹಾಗೆಯೇ ವೃದ್ಧಾಪ್ಯದಲ್ಲಿ ಬೇರೆ ಬೇರೆ ರೀತಿಯ ಬೇರೆ ಬೇರೆ ಪ್ರಮಾಣದ ಪೋಷಕಾಂಶಗಳು ಬೇಕಾಗುತ್ತದೆ. ಈಗಿನ ಹೆಚ್ಚಿನ ಮಹಿಳೆಯರು ಮನೆಯ ಕೆಲಸದ ಜೊತೆ ಕಚೇರಿ ಕೆಲಸವನ್ನು ನಿಭಾಯಿಸುತ್ತಿದ್ದಾರೆ. ಹೀಗಿರುವಾಗ ಅವರ ದೇಹಕ್ಕೆ ಹೆಚ್ಚಿನ ಪೋಷಕಾಂಶಗಳ ಅಗತ್ಯವಿರುತ್ತದೆ. ಹೀಗಾಗಿ ಆರೋಗ್ಯಕರ ಜೀವನ ನಡೆಸಲು ಮಹಿಳೆಯರು ಪೌಷ್ಟಿಕಾಂಶದ ಬಗ್ಗೆ ಹೆಚ್ಚಿನ ಜ್ಞಾನ ಹೊಂದಿರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮೇಲ್ವಿಚಾರಕಾರದ ರಾಜಪ್ಪ, ಸೇವಾ ಪ್ರತಿನಿಧಿ ಯಲ್ಲಮ್ಮ, ಗಂಗಮ್ಮ, ಒಕ್ಕೂಟದ ಅಧ್ಯಕ್ಷೆ ರ–ಜಿಯಾ ಬೇಗಮ್, ಜ್ಞಾನ ವಿಕಾಸ್ ಸದಸ್ಯರು ಭಾಗವಹಿಸಿದರು. ಸೇವಾ ಪ್ರತಿನಿಧಿ ಯಲ್ಲಮ್ಮ ಸ್ವಾಗತಿಸಿದರು, ಜ್ಞಾನ ವಿಕಾಸ ಸಮನ್ವಯ ಅಧಿಕಾರಿ ಮಂಜುಳಾ ಕಾರ್ಯಕ್ರಮ ನಿರೂಪಿಸಿದರು, ಮೇಲ್ವಿಚಾರಕ ಅಣ್ಣಪ್ಪ ಬಾರ್ಕಿ ವಂದಿಸಿದರು.

### ಶ್ರೀ ಬಸವೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಜರುಗಿದ ಧರ್ಮ ಜಾಗೃತಿ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

## ಆಧ್ಯಾತ್ಮದ ಅರಿವಿನಿಂದ ಬದುಕಿಗೆ ಶಾಂತಿ

■ ವಿಜಯಸಾಕ್ಷಿ ಸುದ್ದಿ, ಹರಿಹರ

ಮಾನವೀಯ ಸಂಬಂಧಗಳು ಗಟ್ಟಿಗೊಳ್ಳಲು ಹೃದಯ ಶ್ರೀಮಂತಿಕೆ ಬೇಕು. ನಿಜವಾದ ಆಧ್ಯಾತ್ಮ ಅರಿವಿನಿಂದ ಬದುಕಿಗೆ ಶಾಂತಿ ದೊರಕುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರ ಹಳೇಪೇಟೆ ಶ್ರೀ ಬಸವೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ನಮಗಾಗಿ ಹೇಗೆ ಸುಖ–ಸಂತೋಷ ಬಯಸುತ್ತೇವೆಯೋ ಅದೇ ರೀತಿ ಇತರರಿಗಾಗಿ ಬಯಸುವುದು ನಿಜವಾದ ಧರ್ಮ. ಒಳ್ಳೆಯ ಹೆಸರು ಹಣಕ್ಕಿಂತಲೂ ಹೆಚ್ಚು ಬೆಲೆ ಬಾಳುವಂತಹುದು. ಸುಳ್ಳು ಹೇಳಲು ಹಲವು ದಾರಿ. ಸತ್ಯಕ್ಕೆ ಇರುವುದೊಂದೇ ದಾರಿ. ಮುಳ್ಳಿನ ನಡುವೆ ಗುಲಾಬಿ ಹೂ ಸುಗಂಧ ಬೀರುವ ಹಾಗೆ, ಕಷ್ಟಗಳ ನಡುವೆ ಬಾಳಿ ಬದುಕಿದರೂ ಆದರ್ಶಗಳನ್ನು ಬಿಡಬಾರದು. ಕೈಲಾಸಕ್ಕಿಂತ ಕಾಯಕ, ಧರ್ಮಕ್ಕಿಂತ ದಯೆ, ಅರಿವಿಗಿಂತ ಆಚಾರ, ಅಧಿಕಾರಕ್ಕಿಂತ ಅಭಿಮಾನ, ಭೌತಿಕ ಆಸ್ತಿಗಿಂತ ಆರೋಗ್ಯ, ಮಾನ–ಸನ್ಮಾನಕ್ಕಿಂತ ಸಂಸ್ಕಾರ, ಸಂಸ್ಕೃತಿ ಅತ್ಯಂತ ಮುಖ್ಯ. ಹೃದಯ ಹೃದ್ಭೂಮಿ ಕೃಷಿಗೈದು, ಶಿವಜ್ಞಾನವೆಂಬ ಬೀಜ ಬಿತ್ತಿ ಸಂಸ್ಕಾರ ನೀಡುವಾತನೇ ನಿಜವಾದ ಗುರು ಎಂದರು.



ಹರಪನಹಳ್ಳಿ ತಗ್ಗಿನಮಠ ಸಂಸ್ಥಾನದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ಮಾತನಾಡಿ, ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ ವೀರಶೈವ ಧರ್ಮ ಗಂಡು–ಹೆಣ್ಣು, ಮೇಲು–ಕೀಳು, ಬಡವ–ಬಲ್ಲಿದ ಎನ್ನದೆ ಎಲ್ಲರಿಗೂ ಸಂಸ್ಕಾರ ಕೊಟ್ಟ ಶ್ರೇಯಸ್ಸು ಈ ಧರ್ಮಕ್ಕೆ ಇದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಸಂತ್ಕ್ರಾಂತಿ ಎಲ್ಲ ಕ್ರಾಂತಿಗಳಿಗೆ ಮೂಲ ಗಂಗೋತ್ರಿ ಎಂದರು.

ಹರಿಹರ ಶಾಸಕ ಬಿ.ಪಿ. ಹರೀಶ್ ಮಾತನಾಡಿ, ಭೌತಿಕ ಬದುಕು ಸದೃಢಗೊಳ್ಳಲು ಧರ್ಮದ ಆಚರಣೆ ಮುಖ್ಯ. ಜೀವನದ ಜಂಜಡದಲ್ಲಿ ಸಿಲುಕಿರುವ ಮನುಷ್ಯನಿಗೆ ಗುರು–ಹಿರಿಯರ ಆಶೀರ್ವಾದ ಅವಶ್ಯಕ. ಮನುಷ್ಯನಿಗೆ ಹೆತ್ತ ತಾಯಿ, ಹೊತ್ತ ನೆಲ ಎಷ್ಟು ಮುಖ್ಯವೋ ಅಷ್ಟೇ ಧರ್ಮವೂ ಮುಖ್ಯವೆಂದರು.

ಹಂಪಸಾಗರದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು. ಹರಿಹರ ಕ್ಷೇತ್ರದ ಶಾಸಕರಾದ ಬಿ.ಪಿ. ಹರೀಶ್ ಅವರಿಗೆ 'ಧರ್ಮಸೇವಾ ವಿಭೂಷಣ' ಪ್ರಶಸ್ತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಪ್ರದಾನ ಮಾಡಿದರು. ಸಮಾರಂಭದಲ್ಲಿ ಹರಿಹರದ ಮಾಜಿ ಶಾಸಕ ಹೆಚ್. ಎಸ್. ಶಿವಶಂಕರ್, ಮಲೆಬೆನ್ನೂರಿನ ಶ್ರೀ ವೀರಭದ್ರೇಶ್ವರ ಟ್ರಸ್ಟಿನ ಅಧ್ಯಕ್ಷ ಚಿದಾನಂದಪ್ಪ, ಹರಿಹರದ ತಹಸೀಲ್ದಾರ್ ಕೆ.ಎಂ. ಗುರುಬಸವರಾಜ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಪಟೇಲ್ ಬಸವರಾಜಪ್ಪ, ಗಜಾಪುರದ ವೀರಯ್ಯ ಗುತ್ತೂರು, ಮಲ್ಲಜ್ಜರ ವಿರೂಪಾಕ್ಷಪ್ಪ, ಎನ್. ಹೆಚ್. ಪಾಟೀಲ, ವೀರೇಶ ಮೊದಲಾದ ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಗೌರಿಶ್ರೀ, ಕೊಂಡಜ್ಜಿ ಶಾಂಭವಿ, ತೇಜಶ್ರೀ ಭರತ ನಾಟ್ಯ ಮಾಡಿದರು. ಶಾಂತಕುಮಾರಿ ಸ್ವಾಗತಿಸಿದರು. ಗುರು ಬಸವರಾಜ ಮತ್ತು ಡಾ. ಶ್ವೇತಾ ನಿರೂಪಿಸಿದರು. ಕಾಂತರಾಜ ಮತ್ತು ವೀರೇಶ್ ಇವರಿಂದ ಸಂಗೀತ ಜರುಗಿತು. ಸುಲಫಲಮಠದ ಲಿಂ. ಶಾಂತಮ್ಮ–ಪಂಚಾಕ್ಷರಯ್ಯನವರ ಸ್ಮರಣಾರ್ಥ ಅವರ ಮಕ್ಕಳು ಅನ್ನ ದಾಸೋಹ ಸೇವೆ ಸಲ್ಲಿಸಿದರು.

## ಜು.18ರಂದು ವಿಶೇಷ ತರಬೇತಿ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಸಹಕಾರ ಇಲಾಖೆ , ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಹಾಗೂ ಧಾರವಾಡ ಹಾಲು ಒಕ್ಕೂಟ, ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮುಂಡರಗಿ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ವಿಶೇಷ ತರಬೇತಿ ಶಿಬಿರವನ್ನು ಜುಲೈ 18 ಶುಕ್ರವಾರದಂದು ಜಿಲ್ಲೆಯ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಎ.ಪಿ.ಎಂ.ಸಿ. ಸಭಾಭವನ ಬೆಳಿಗ್ಗೆ 10:30ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷರಾದ ವಾಯ್. ಎಫ್. ಪಾಟೀಲ ವಹಿಸುವರು. ಧಾರವಾಡ ಹಾಲು ಒಕ್ಕೂಟದ ನಿರ್ದೇಶಕರಾದ ಲಿಂಗರಾಜಗೌಡ ಎಚ್. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಬೆಳ್ಳಟ್ಟಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ. ಅಧ್ಯಕ್ಷರಾದ ಪ್ರಕಾಶ ಬಿ. ಮಹಾಜನಶೆಟ್ಟರ ಇವರಿಂದ ಸಹಕಾರಿ ಪಿತಾಮಹರ ಭಾವಚಿತ್ರಕ್ಕೆ ಪುಷ್ಪಾರ್ಚಣೆ ನೆರವೇರಿಸುವರು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ನಿರ್ದೇಶಕರಾದ ಶಿದ್ದನಗೌಡ ಬಿ. ಪಾಟೀಲ, ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕಿಯರಾದ ಶ್ರೀಮತಿ ಎಸ್. ಎಸ್. ಕಬಾಡೆ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಗದಗ ಉಪನಿರ್ದೇಶಕರಾದ ಅರವಿಂದ ಎನ್. ನಾಗಜ್ಜನವರ, ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಡಿ. ಟಿ. ಕಳಸದ, ಸಹಕಾರ ಸಂಘಗಳ ಸಹಾಯಕ ನಿಬಂಧಕಿಯರಾದ ಶ್ರೀಮತಿ ಪುಷ್ಪಾ ಕೆ. ಕಡಿವಾಳ, ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಕೆ. ಸಿ. ಕೂಸನೂರಮಠ, ಚಂದ್ರಶೇಖರ ಲಮಾಣಿ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ಮಾರಾಟಾಧಿಕಾರಿಗಳಾದ ಬಿ. ಆರ್. ನಿಡಗುಂದಿ ಧಾರವಾಡ ಹಾಲು ಒಕ್ಕೂಟದ ಗದಗ ಜಿಲ್ಲಾ ಮುಖ್ಯಸ್ಥರಾದ ಡಾ. ಪ್ರಸನ್ನ ಎಸ್. ಪಟ್ಟೇದ, ಧಾರವಾಡ ಹಾಲು ಒಕ್ಕೂಟದ ಮುಂಡರಗಿ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ವಿಸ್ತರಣಾಧಿಕಾರಿಗಳಾದ ಸಿ. ಎಸ್. ಕಲ್ಲನಗೌಡರ, ಬಸವರಾಜ ಎಸ್. ಜುಮ್ಮಣ್ಣವರ, ಕಿರಣ ಎಸ್. ಪಾಟೀಲ ಮುಖ್ಯ ಅತಿಥಿ ಸ್ಥಾನವನ್ನು ಅಲಂಕರಿಸುವರು ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಚಂದ್ರಶೇಖರ ಎಸ್. ಕರಿಯಪ್ಪನವರ ತಿಳಿಸಿದ್ದಾರೆ. ತರಬೇತಿ ಕಾರ್ಯಾಗಾರದಲ್ಲಿ ಮಾರುಕಟ್ಟೆಯ ಮೇಲೆ ಹಾಲಿನ ಗುಣಮಟ್ಟ ಪ್ರಭಾವ ಕುರಿತು, ಡಾ. ವಿರೇಶ ಎಸ್. ತರಲಿ ವಿಶ್ರಾಂತ ವ್ಯವಸ್ಥಾಪಕ ನಿರ್ದೇಶಕರು, ಧಾರವಾಡ ಹಾಲು ಒಕ್ಕೂಟ, ಧಾರವಾಡ, ಶುದ್ಧ ಹಾಗೂ ಅಧಿಕ ಹಾಲು ಉತ್ಪಾದನೆ ಮತ್ತು ಅಘೋಚರ ಕೆಚ್ಚಲು ಬಾವು ಕುರಿತು, ಡಾ. ಎಂ. ಬಿ. ಮಡಿವಾಳರ ನಿವೃತ್ತ ಜಂಟಿ ನಿರ್ದೇಶಕರು, ಕ.ಹಾ. ಮ. ತರಬೇತಿ ಕೇಂದ್ರ ರಾಯಾಪೂರ, ಧಾರವಾಡ ಹಾಗೂ ಸಹಕಾರ ಸಂಘಗಳಲ್ಲಿ ಲೆಕ್ಕಪತ್ರಗಳ ನಿರ್ವಹಣೆ ಕುರಿತು. ಬಿ. ಪಿ. ಹಿರೇಮಠ ನಿವೃತ್ತ ಸಹಾಯಕ ವ್ಯವಸ್ಥಾಪಕರು ಧಾರವಾಡ ಹಾಲು ಒಕ್ಕೂಟ, ಧಾರವಾಡ ಇವರು ಉಪನ್ಯಾಸ ನೀಡುವರು.

## ಹಳ್ಳದ ದಂಡೆಯಲ್ಲಿ ಶವ ಸಂಸ್ಕಾರ ಖಂಡನೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಕೊಪ್ಪಳ ತಾಲೂಕಿನ ಮಂಗಳಾಪೂರ ಗ್ರಾಮದಲ್ಲಿ ಶವ ಸಂಸ್ಕಾರಕ್ಕೆ ಸ್ಮಶಾನ ಭೂಮಿ ಇಲ್ಲದಿರುವುದು ಖಂಡನೀಯ. ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲೂಕಗಳಿಗೆ ಒಳಪಡುವ ಪ್ರತಿಯೊಂದು ಗ್ರಾಮಕ್ಕೆ ಸ್ಮಶಾನ ಭೂಮಿ ಇರುವ ಬಗ್ಗೆ ಈ ಹಿಂದೆ ಸುಪ್ರೀಮ್ ಕೋರ್ಟ್ ಮಾಹಿತಿಯನ್ನು ಕೇಳಿತ್ತು. ಆದರೆ ಅಧಿಕಾರಿಗಳು ನ್ಯಾಯಾಲಯಕ್ಕೆ ಸುಳ್ಳು ಮಾಹಿತಿ ನೀಡಿರುವುದಕ್ಕೆ ಮಂಗಳಾಪುರ ಗ್ರಾಮವೇ ಸಾಕ್ಷಿ ಎಂದು ಜಿಲ್ಲಾ ಡಿ.ಎಸ್.ಎಸ್



ಸಂಘಟನಾ ಸಂಚಾಲಕ ಸತೀಶ ಎಚ್.ಹೂಲಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಗ್ರಾಮದಲ್ಲಿ ಕೆಲವೊಂದು ಜನರಿಗೆ ಸ್ವಂತ ಜಮೀನು ಇರುವುದರಿಂದ ಅವರ ಸಂಬಂಧಿಕರು ನಿಧನ ಹೊಂದಿದ ಸಮಯದಲ್ಲಿ ಸ್ವಂತ ಜಮೀನ ಭೂಮಿಯಲ್ಲಿ ಶವ ಸಂಸ್ಕಾರ ಮಾಡುತ್ತಾರೆ. ಆದರೆ ಮಂಗಳಾಪೂರ ಗ್ರಾಮದಲ್ಲಿ ಜಮೀನು ಇಲ್ಲದವರು ಶವ ಸಂಸ್ಕಾರವನ್ನು ಹಳ್ಳದ ದಂಡೆ ಮೇಲೆ ಮಾಡಬೇಕಿರುವುದು ಖಂಡನೀಯ ಮತ್ತು ಖೇದಕರ ಸಂಗತಿ. ಜಿಲ್ಲಾಡಳಿತ ಈ ಕೂಡಲೇ ಎಲ್ಲಾ ಗ್ರಾಮದಲ್ಲಿ ಸರ್ವೆ ಮಾಡಿ ಸ್ಮಶಾನ ಭೂಮಿಯನ್ನು ಮಂಜೂರು ಮಾಡಲು ಅವರು ಒತ್ತಾಯಿಸಿದ್ದಾರೆ.

## ಬಿಜೆಪಿ ನಾಯಕನ ದೂರಿನಿಂದ 150 ವರ್ಷ ಹಳೆಯ ದರ್ಗಾ ನೆಲಸಮ: ಭಾರೀ ಕೋಲಾಹಲಕ್ಕೆ ಕಾರಣ

■ ವಿಜಯಸಾಕ್ಷಿ ಸುದ್ದಿ, ಸಿದ್ಧಾರ್ಥನಗರ

ಉತ್ತರಪ್ರದೇಶದ ಸಿದ್ಧಾರ್ಥನಗರ ಜಿಲ್ಲೆಯ ದೊಮರಿಯಾಗಂಜ್ ಪಟ್ಟಣದಲ್ಲಿ ಶತಮಾನಗಳ ಇತಿಹಾಸವಿರುವ 150 ವರ್ಷಗಳ ಹಳೆಯ ಫಗು ಶಾ ಬಾಬಾ ದರ್ಗಾವನ್ನು ಮಂಗಳವಾರದಂದು ಸ್ಥಳೀಯ ಆಡಳಿತವು ಜೆಸಿಬಿ ಬಳಸಿ ನೆಲಸಮಗೊಳಿಸಿದೆ. ಮಾಜಿ ಬಿಜೆಪಿ ಶಾಸಕ ರಾಘವೇಂದ್ರ ಪ್ರತಾಪ್ ಸಿಂಗ್ ಅವರು ದರ್ಗಾವು ಸರ್ಕಾರಿ ಗೋಮಾಳದಲ್ಲಿ ಅಕ್ರಮವಾಗಿ ನಿರ್ಮಿಸಲಾಗಿದೆ ಎಂದು ದೂರು ನೀಡಿದ ನಂತರ ಈ ವಿವಾದಾತ್ಮಕ ಕ್ರಮವನ್ನು ಕೈಗೊಳ್ಳಲಾಗಿದೆ. ಈ ಘಟನೆಯು ಸ್ಥಳೀಯವಾಗಿ ತೀವ್ರ ಉದ್ವಿಗ್ನತೆ ಮತ್ತು ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ.

ಆಡಳಿತದ ಸಮರ್ಥನೆ ಮತ್ತು ಸ್ಥಳೀಯರ ಆಕ್ರೋಶ:

"ದರ್ಗಾವು ಸರ್ಕಾರಿ ಜಾಗದಲ್ಲಿ ನಿರ್ಮಿಸಲಾಗಿತ್ತು. ಸೂಕ್ತ ನೋಟಿಸ್ ನೀಡಿದ ನಂತರ, ಇಂದು ಪೊಲೀಸ್ ಪಡೆಯ ನೆರವಿನೊಂದಿಗೆ ಅದನ್ನು ತೆರವುಗೊಳಿಸಲಾಗಿದೆ," ಎಂದು ಜಿಲ್ಲಾಧಿಕಾರಿ ರಾಜ ಗಣಪತಿ ಆರ್. ಸ್ಪಷ್ಟಪಡಿಸಿದ್ದಾರೆ. ಕಾನೂನು ಪ್ರಕ್ರಿಯೆಯ ಮೂಲಕವೇ ಈ ಕ್ರಮವನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕಚೇರಿಯ ಅಧಿಕಾರಿಗಳು ಹೇಳಿದ್ದಾರೆ.

## ನ್ಯಾಯವಾದಿಗಳಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯತಿಗೆ ಸಂಬಂಧಿಸಿದಂತೆ ಉಚ್ಚ ನ್ಯಾಯಾಲಯ ಧಾರವಾಡ /ಬೆಂಗಳೂರು ಮತ್ತು ಕರ್ನಾಟಕ ಆಡಳಿತ ಮಂಡಳಿ ಬೆಳಗಾವಿ/ ಬೆಂಗಳೂರು ಇಲ್ಲಿ ದಾಖಲಾಗುವ ರಿಟ್ ಅರ್ಜಿ, ದಾವೆ ಹಾಗೂ ಇತ್ಯಾದಿ ಮೊಕದ್ದಮೆಗಳಲ್ಲಿ ವಾದ ಮಂಡಿಸಲು ನ್ಯಾಯವಾದಿಗಳನ್ನು ನೇಮಕ ಮಾಡಲು ನ್ಯಾಯವಾದಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತಮ್ಮ ಹೆಸರು, ವಯಸ್ಸು, ವಿದ್ಯಾರ್ಹತೆ , ಅನುಭವ, ವಿವಿಧ ಕಚೇರಿಗಳ ಪರವಾಗಿ ನ್ಯಾಯವಾದಿಗಳಾಗಿ ಕಾರ್ಯನಿರ್ವಹಿಸಿದ ವಿವರದ ಕುರಿತು ಆಯಾ ಕಚೇರಿಯಿಂದ ಪಡೆದ ಪ್ರಮಾಣ ಪತ್ರ ಸಲ್ಲಿಸಬೇಕು. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ ಹಾಗೂ ಗ್ರಾ.ಪಂ/ ತಾ.ಪಂ./ ಜಿ.ಪಂ. ಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ವಾದ ಮಂಡಿಸಿದ ಬಗ್ಗೆ ವಿವರ ಸಲ್ಲಿಸಬೇಕು. ಕನಿಷ್ಟ 10 ರಿಂದ 15 ವರ್ಷ ನ್ಯಾಯಾಲಯದ ಕಾರ್ಯಕಲಾಪಗಳಲ್ಲಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ ಬಗ್ಗೆ ಸೂಕ್ತ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ ಅಥವಾ ನೋಂದಣಿ ಪ್ರಮಾಣ ಪತ್ರ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜುಲೈ 30 ಕೊನೆಯ ದಿನವಾಗಿದ್ದು, ಆಸಕ್ತ ನ್ಯಾಯವಾದಿಗಳು ಅರ್ಜಿಯನ್ನು ತಮ್ಮ ಅಗತ್ಯ ದಾಖಲೆಗಳೊಂದಿಗೆ ಗದಗ ಜಿಲ್ಲಾ ಪಂಚಾಯತಿ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಕಾರ್ಯಾಲಯ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ 01, ಹುಬ್ಬಳ್ಳಿ ರಸ್ತೆ, ಗದಗ – 582 101 ದೂರವಾಣಿ ಸಂಖ್ಯೆ 08372–234375 ಸಂಪರ್ಕಿಸಬಹುದಾಗಿದೆ.

## ಮಲ್ಲಿಕಾರ್ಜುನ ಹೂಗಾರ ಸಿ.ಎ ಪರೀಕ್ಷೆಯಲ್ಲಿ ಉತ್ತೀರ್ಣ



■ವಿಜಯಸಾಕ್ಷಿ ಸುದ್ದಿ, ಗದಗ

9 ವರ್ಷಗಳ ಕಾಲ ಚಾರ್ಟೆಡ್ ಅಕೌಂಟೆಂಟ್ ಪರೀಕ್ಷೆಯ ತಯಾರಿ ನಡೆಸಿದ ಬಳ್ಳಾರಿಯ ಸಿರಗುಪ್ಪ ಮೂಲದ ಮಲ್ಲಿಕಾರ್ಜುನ್ ಹೂಗಾರ್ ಮೇ 2025ರಲ್ಲಿ ನಡೆಸಿದ ಸಿಎ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಉತ್ತೀರ್ಣರಾಗಿದ್ದಾರೆ.

ಗದುಗಿನ ಕೆವಿಎಸ್‌ಆರ್ ಮಹಾವಿದ್ಯಾಲಯದಲ್ಲಿ ವಾಣಿಜ್ಯ ವಿಭಾಗದಲ್ಲಿ ಪದವಿಪೂರ್ವ ಶಿಕ್ಷಣ, ಜ. ತೋಂಟದಾರ್ಯ ಮಹಾವಿದ್ಯಾಲಯದಲ್ಲಿ ಬಿಕಾಂ ಪದವಿ, 2016ರಲ್ಲಿ ಚಾರ್ಟೆಡ್ ಅಕೌಂಟೆಂಟ್ ಪದವಿಗೆ ಪ್ರವೇಶ ಪಡೆದು 3 ವರ್ಷಗಳ ವೃತ್ತಿಪರ ತರಬೇತಿಯನ್ನು ಎ. ರಾಘವೇಂದ್ರ ರಾವ್ ಅಂಡ್ ಅಸೋಸಿಯೇಟ್ಸ್, ಲೆಕ್ಕ ಪರಿಶೋಧನಾ ಸಂಸ್ಥೆಯ ಪ್ರಾಂಶುಪಾಲರಾದ ಆನಂದ್ ಎಲ್.ಪೋತ್ನಿಸ್ ಇವರಲ್ಲಿ ವೃತ್ತಿಪರ ತರಬೇತಿಯನ್ನು ಪಡೆದಿದ್ದಾರೆ.

ನನ್ನ ಯಶಸ್ವಿಗೆ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಡಾ.ಕಲ್ಲಯ್ಯಜ್ಜನವರ ಪ್ರೋತ್ಸಾಹ ಹಾಗೂ ಆಶ್ರಮದ ಸರ್ವರೂ ಕಾರಣವಾಗಿದ್ದು, ಅವರೆಲ್ಲರಿಗೂ ಮಲ್ಲಿಕಾರ್ಜುನ ಕೃತಜ್ಞತೆ ಸಲ್ಲಿಸಿದ್ದಾರೆ.

### ಶಾಲೆಯಿಂದ ಹೊರಗುಳಿದ ಮಕ್ಕಳ ಮನೆ ಮನೆ ಭೇಟಿಗೆ ನಿರ್ಧಾರ: ಜಿಲ್ಲಾಧಿಕಾರಿ ದಿವ್ಯ ಪ್ರಭು

# ಸಮುದಾಯದಲ್ಲಿ ಶೈಕ್ಷಣಿಕ ಜಾಗೃತಿಗೆ ಪಣ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯಲ್ಲಿ ಶೈಕ್ಷಣಿಕ ಸುಧಾರಣೆ ಹಾಗೂ ಕಲಿಕಾ ಗುಣಮಟ್ಟ ಹೆಚ್ಚಿಸಲು ಮಿಷನ್ ವಿದ್ಯಾಕಾಶಿ ಯೋಜನೆಯಡಿ ಜಿಲ್ಲೆಯ ಎಲ್ಲ ಶಾಲೆಗಳಲ್ಲಿ ದಾಖಲಾಗಿ, ಗೈರು ಹಾಜರು ಇರುವ ಮಕ್ಕಳ ಮನೆಗೆ ಭೇಟಿ ನೀಡಿ, ಮನ ಒಲಿಸುವ ಮತ್ತು ಪ್ರೋತ್ಸಾಹಿಸುವ ಕಾರ್ಯಕ್ಕಾಗಿ ಸಮುದಾಯದ ಸಹಭಾಗಿತ್ವವನ್ನು ಜಿಲ್ಲಾಡಳಿತ ಮತ್ತು ಶಿಕ್ಷಣ ಇಲಾಖೆ ಬಯಸುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು. ಅವರು ಬುಧವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಶಾಲಾ ಹಾಜರಾತಿ ಹೆಚ್ಚಿಸುವ ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ, ಮರಳಿ ಶಾಲೆಗೆ ಸೇರಿಸುವಲ್ಲಿ ಸಮುದಾಯಗಳ ಸಹಭಾಗಿತ್ವ ಕಾರ್ಯಕ್ರಮದಡಿ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪ್ರಮುಖರ ಮತ್ತು ವಿವಿಧ ಸರ್ಕಾರಿ ಸಮಿತಿಗಳ ಸದಸ್ಯರ, ಪ್ರತಿನಿಧಿಗಳ ಸಭೆ ಜರುಗಿಸಿ ಮಾತನಾಡಿದರು.

ಕಳೆದ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ. 37.08ರಷ್ಟು ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಮತ್ತು ಶೇ. 35.24ರಷ್ಟು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು



ಹಾಗೂ ಶೇ. 49.05ರಷ್ಟು ಅಲ್ಪಸಂಖ್ಯಾತ ಸಮುದಾಯಗಳ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಒಟ್ಟು ಸಂಖ್ಯೆಗೆ ಹೋಲಿಸಿದಾಗ ಇದು ಬಹಳ ಕಡಿಮೆಯಾಗಿದೆ. ಈ ಹಿನ್ನೆಲೆಯಲ್ಲಿ ಶಾಲೆಗೆ ದಾಖಲಾಗಿರುವ ಪ್ರತಿ ಮಗು ಶಾಲೆಗೆ ಬಂದು ಎಲ್ಲ ಸರ್ಕಾರಿ ಸೌಲಭ್ಯಗಳನ್ನು ಪಡೆದುಕೊಳ್ಳುವಂತೆ ಮತ್ತು ನಿರಂತರವಾಗಿ ಶಾಲೆಯಲ್ಲಿದ್ದು, ಉತ್ತಮ ಶೈಕ್ಷಣಿಕ ಪ್ರಗತಿ ಹೊಂದಲು ಈ ಸಮುದಾಯಗಳ ಪ್ರಮುಖರ ಹಾಗೂ ಹಿರಿಯರ ಸಹಕಾರ ಅಗತ್ಯವಿದೆ ಎಂದು ತಿಳಿಸಿದರು.

ಪೋಷಕರು ಮತ್ತು ಸಮುದಾಯದ ಸಹಭಾಗಿತ್ವವನ್ನು ಹೆಚ್ಚಿಸಲು ಕಾರ್ಯತಂತ್ರಗಳನ್ನು ರೂಪಿಸುವುದು ಮಹತ್ವವಾಗಿದೆ. ಕಳೆದ ವರ್ಷದ ಎಸ್.ಎಸ್.ಎಲ್.ಸಿ ಫಲಿತಾಂಶದ ಅಂಕಿ-ಅಂಶಗಳನ್ನು ಗಮನಿಸಿದಾಗ ಜಿಲ್ಲಾವಾರು, ತಾಲೂಕುವಾರು, ಮತ್ತು ಶಾಲಾವಾರು ಎಸ್‌ಸಿ ಮತ್ತು ಎಸ್‌ಟಿ ಸೇರಿದಂತೆ ಅನುತ್ತೀರ್ಣವಾದ ವಿದ್ಯಾರ್ಥಿಗಳು ಯಾವ ವಿಷಯಗಳಲ್ಲಿ ಹೆಚ್ಚು ಅಂಕ ಕಳೆದುಕೊಳ್ಳುತ್ತಿದ್ದಾರೆ ಎಂಬುದರ ಚರ್ಚೆ ಮಾಡಿ ಸೂಕ್ತವಾದ ಕ್ರಮಗಳನ್ನು ವಹಿಸಬೇಕೆಂದು ಅವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಶುಭಾ ಪಿ ಸ್ವಾಗತಿಸಿ, ಸಮಾಜ ಕಲ್ಯಾಣ ಇಲಾಖೆ, ಅರೆ ಅಲೆಮಾರಿ ಸಮುದಾಯ ಅಭಿವೃದ್ಧಿ ನಿಗಮ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಯೋಜನೆಗಳ ಕುರಿತು ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಶಾಲಾ ಶಿಕ್ಷಣ ಇಲಾಖೆಯ ಮಕ್ಕಳ ದಾಖಲಾತಿ, ಕಲಿಕೆ ಮತ್ತು ಎಸ್.ಎಸ್.ಎಲ್.ಸಿ ಫಲಿತಾಂಶದ ಕುರಿತು ಪ್ರಾತ್ಯಕ್ಷಿಕೆಯ ಮೂಲಕ ಸಭೆಯಲ್ಲಿ ಚರ್ಚಿಸಿದರು. ಉಪ ಸಮನ್ವಯ ಅಧಿಕಾರಿ ಡಾ. ರೇಣುಕಾ ಅಮಲಜೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಎಸ್‌ಸಿ-ಎಸ್‌ಟಿ ಸಮುದಾಯದ ಪ್ರಮುಖರಾದ ಎಮ್.ಅರವಿಂದ, ಪ್ರೇಮನಾಥ ಕೆ. ಚಿಕ್ಕತುಂಬಳ, ಲಕ್ಷ್ಮಣ ಬಕ್ಕಾಯಿ, ಸುರೇಶ ಮಾಕಪ್ಪನವರ, ಕಲ್ಮೇಶ ಹಾದಿಮನಿ, ಅಶೋಕ ದೊಡ್ಡಮನಿ, ಮೋಹನ ಹಿರೇಮನಿ, ಯಲ್ಲಪ್ಪ ಮಂಟೂರ, ಹನುಮಂತಪ್ಪ ಚಲವಾದಿ, ಮಂಜುನಾಥ ಸವಣೂರ ಸೇರಿದಂತೆ ವಿವಿಧ ಮುಖಂಡರು, ಮಹಿಳಾ ಪ್ರಮುಖರು ಮಾತನಾಡಿದರು.

ಗ್ರಾಮ ಮಟ್ಟದಲ್ಲಿ ಅಧಿಕಾರಿಗಳ ಮತ್ತು ಗ್ರಾಮಸ್ಥರ ಸಹಕಾರದಲ್ಲಿ ತಂಡಗಳನ್ನು ರಚಿಸಿ, ಶಿಕ್ಷಕರೊಂದಿಗೆ ಸಮನ್ವಯ ಸಾಧಿಸಿ, ಶಾಲೆಯ ಪ್ರತಿ ಗೈರು ವಿದ್ಯಾರ್ಥಿಯ ಮನೆಗೆ ಭೇಟಿ ನೀಡುವ ಮತ್ತು ಶಾಲಾ ಹಾಜರಾತಿ ಹಾಗೂ ಶೈಕ್ಷಣಿಕ ಸೌಲಭ್ಯಗಳ ಸದ್ಬಳಕೆಗಾಗಿ ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ಆಯೋಜಿಸಲು ಜಿ.ಪಂ ಸಿಇಓ ಅವರಿಂದ ಕ್ರಮವಹಿಸುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

### ಜಿಲ್ಲಾ ಕಸಾಪದಿಂದ ವಚನ ಸಂಶೋಧನೆಯ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ ಜನ್ಮದಿನ ಕಾರ್ಯಕ್ರಮ

# ವಚನ ಪ್ರಸಾರಕ್ಕೆ ಹಳಕಟ್ಟಿಯವರ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಗದಗ

ಕಲ್ಯಾಣ ಕ್ರಾಂತಿಯ ನಂತರ ಶರಣರಿಂದ ದೊರೆತ ತಾಳೆಗರಿ, ಹಸ್ತಪ್ರತಿ ಕಟ್ಟುಗಳು ತಲೆತಲಾಂತರದಿಂದ ಪೂಜೆಗೊಳ್ಳುತ್ತಿದ್ದವು. ಇಂತಹ ಅಮೂಲ್ಯ ವಚನಗಳ ಕಟ್ಟುಗಳನ್ನು ಸಂಗ್ರಹಿಸಿ, ಸಂಪಾದಿಸಿ, ಮುದ್ರಿಸಿ ವಚನ ಸಾಹಿತ್ಯ ಬೆಳಕನ್ನು ಮನೆ-ಮನಗಳಿಗೆ ಪಸರಿಸಿದ ಕೀರ್ತಿ ಫ. ಗು. ಹಳಕಟ್ಟಿ ಅವರಿಗೆ ಸಲ್ಲುತ್ತದೆ ಎಂದು ಶರಣ ಸಂಸ್ಕೃತಿ ಚಿಂತಕರಾದ ಗೌರಕ್ಕ ಬಡಿಗಣ್ಣವರ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ವಚನ ಸಂಶೋಧನೆಯ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ ಜನ್ಮದಿನದ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಅಮೂಲ್ಯವಾದ ವಚನಗಳನ್ನು ಮುದ್ರಿಸಲು ಯಾರೂ ಮುಂದೆ ಬರದೇ ಹೋದಾಗ ತಮ್ಮ ಮನೆಯನ್ನೇ ಮಾರಿ 'ಹಿತಚಿಂತಕ ಮುದ್ರಣಾಲಯ' ಸ್ಥಾಪಿಸಿ ವಚನ ಸಂಪುಟಗಳನ್ನು ಹೊರತಂದರು. ಇವರ ಮೂಲಕ 250ಕ್ಕೂ ಹೆಚ್ಚು ವಚನಕಾರರು ಬೆಳಕಿಗೆ ಬಂದರು. 150ಕ್ಕೂ ಹೆಚ್ಚು ಕೃತಿಗಳನ್ನು ಸಾರಸ್ವತ ಲೋಕಕ್ಕೆ ನೀಡಿದ್ದಾರೆ ಎಂದು ತಿಳಿಸಿದರು.




ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಶಿವಲೀಲಾ ಅಕ್ಕಿ, ಜಾಗತಿಕ ಸಾಹಿತ್ಯಕ್ಕೆ ವಚನ ಸಾಹಿತ್ಯ ಕನ್ನಡದ ಕೊಡುಗೆಯಾಗಿದೆ. ಇಲ್ಲಿರುವ ವಿಚಾರಗಳನ್ನು ಅರಿತು ಆಚರಿಸಿದರೆ ಜೀವನ ಪಾವನವಾಗುತ್ತದೆ. ಹಳಕಟ್ಟಿ ಶರಣರು ತಮ್ಮ ಜೀವನವನ್ನೇ ವಚನ ಸಾಹಿತ್ಯದ ಪ್ರಚಾರ ಮತ್ತು ಪ್ರಸಾರಕ್ಕೆ ಮುಡಿಪಾಗಿಟ್ಟಿದ್ದರು ಎಂದರು.

ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ದೂರದೃಷ್ಟಿ ವ್ಯಕ್ತಿತ್ವದ ಹಳಕಟ್ಟಿಯವರು ಸಾಹಿತ್ಯ ಮತ್ತು ಪತ್ರಿಕೋದ್ಯಮದ ಜೊತೆಗೆ ಸಂಘಟನೆ, ಬ್ಯಾಂಕಿಂಗ್, ಕೃಷಿ, ನೇಕಾರಿಕೆ, ಸಹಕಾರಿ ಹೀಗೆ ಎಲ್ಲದರಲ್ಲೂ ತಮ್ಮನ್ನು ತೊಡಗಿಸಿಕೊಂಡು ಗ್ರಾಮೀಣಾಭಿವೃದ್ಧಿ ಸಂಘ, ಒಕ್ಕಲುತನ ಸಹಕಾರಿ ಸಂಘ, ನೇಕಾರರ ಸಂಘ, ಹತ್ತಿ ಮಾರಾಟ ಸಂಘಗಳು ಸೇರಿದಂತೆ ಸಹಕಾರಿ ಸಂಘಗಳನ್ನು ಸಂಸ್ಥಾಪಿಸಿ ತನ್ಮೂಲಕ ಒಟ್ಟಾರೆ ಸಮಾಜದ ಅಭಿವೃದ್ಧಿಗಾಗಿ ದುಡಿದ ಅಪರೂಪದ ವ್ಯಕ್ತಿಯಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಅನ್ನದಾನಿ ಹಿರೇಮಠ, ಯಲ್ಲಪ್ಪ ಹಂದ್ರಾಳ, ಬಸವರಾಜ ವಾರಿ, ರಾಜಶೇಖರ ಕರಡಿ, ವೀಣಾ ತಡಸದ, ಸುರೇಶ ಕುಂಬಾರ, ರತ್ನಕ್ಕ ಪಾಟೀಲ, ಬಿ.ಎಸ್. ಹಿಂಡಿ, ಎಂ.ಎಫ್. ಡೋಣಿ, ಲಿಂಗರಾಜ ಪಾಟೀಲ, ಅಶೋಕ ಹಾದಿ, ಜಿ.ಎ. ಪಾಟೀಲ, ಚನ್ನಬಸಪ್ಪ ಅಂಗಡಿ, ಸಿ.ಎಂ. ಮಾರನಬಸರಿ, ಶಶಿಕಾಂತ ಕೊರ್ಲಹಳ್ಳಿ, ಸುರೇಶ ಅಂಗಡಿ, ಎಚ್.ಡಿ. ಕುರಿ, ಶೇಖರಪ್ಪ ಕಳಸಾಪೂರಶೆಟ್ರ, ಶಕುಂತಲಾ ಗಿಡ್ನಂದಿ, ಬೂದಪ್ಪ ಅಂಗಡಿ, ಶಾಂತಲಾ ಹಂಚಿನಾಳ, ರತ್ನಾ ಪುರಂತರ, ರಾಜೇಶ್ವರ ಬಡ್ನಿ, ಉಮಾದೇವಿ ಕಣವಿ, ಪಾರ್ವತಿ ಮುಗಳಿ ಮೊದಲಾದವರು ಹಾಜರಿದ್ದರು. ಡಾ. ಫ.ಗು. ಹಳಕಟ್ಟಿಯರವ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಗೌರವ ಕಾರ್ಯದರ್ಶಿ ಡಾ. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಿ.ಎಸ್. ನಾಯಕ ಕಾರ್ಯಕ್ರಮ ನಿರೂಪಿಸಿದರು. ರಾಹುಲ ಗಿಡ್ನಂದಿ ವಂದಿಸಿದರು.

## ಅಂಗಡಿಗಳ ತೆರವು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಇತಿಹಾಸ ಪ್ರಸಿದ್ಧ ದೂದಪೀರಾಂ ದರ್ಗಾ ಎದುರಿಗೆ ಪುರಸಭೆ ಜಾಗೆಯಲ್ಲಿ ನಿರ್ಮಿಸಲಾಗಿದ್ದ ಹತ್ತಾರು ಅಂಗಡಿಗಳನ್ನು ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ನೇತೃತ್ವದಲ್ಲಿ ಸಿಬ್ಬಂದಿಗಳು ತೆರವುಗೊಳಿಸಿದರು.

ದೂದಪೀರಾಂ ದರ್ಗಾ ಎದುರಿನಿಂದ ಶಾದಿಮಹಲ್ ಕಡೆ ತೆರಳುವ ರಸ್ತೆಯನ್ನು ಸಿಸಿ ರಸ್ತೆಯನ್ನಾಗಿ ಮಾಡಲಾಗುತ್ತಿದ್ದು, ಅಂದಾಜು 30 ಅಂಗಡಿಗಳು ಅಡ್ಡಿ ಆಗಿದ್ದವು. ಈ ಹಿನ್ನೆಲೆಯಲ್ಲಿ ಅವುಗಳನ್ನು ಅಲ್ಲಿಂದ ತೆರವುಗೊಳಿಸಿ ಸಿಸಿ ರಸ್ತೆ ನಿರ್ಮಿಸಲಾಗುವುದು ಎಂದು ಮುಖ್ಯಾಧಿಕಾರಿ ತಿಳಿಸಿದರು.

ಕೆಲವರು ಒತ್ತುವರಿ ತೆರವಿಗೆ ಕೊಂಚ ವಿರೋಧ ಮಾಡಿದರೂ ಸಹ, ಮೊದಲು ರಸ್ತೆ ಆಗಲಿ ಎಂಬ ಉದ್ದೇಶದಿಂದ ನಮ್ಮ ಅಂಗಡಿಗಳನ್ನು ತರವುಗೊಳಿಸಿ ಸಿಸಿ ರಸ್ತೆ ನಿರ್ಮಾಣಕ್ಕೆ ಅನುಕೂಲ ಮಾಡಿಕೊಟ್ಟಿದ್ದೇವೆ ಎಂದು ಅಂಗಡಿಕಾರೊಬ್ಬರು ಹೇಳಿದರು.

ಈ ವೇಳೆ ಪುರಸಭೆ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಹನಮಂತಪ್ಪ ನಂದೆಣ್ಣವರ ಸೇರಿದಂತೆ ಪೌರ ಕಾರ್ಮಿಕರು ಇದ್ದರು.

# ಶಾಲಾ ಮಕ್ಕಳಿಗೆ ಲಸಿಕೆ ವಿತರಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಾಲಾ ಮಕ್ಕಳಿಗೆ ಬರುವ ರೋಗಗಳನ್ನು ತಡೆಗಟ್ಟಲು ಲಸಿಕೆಗಳನ್ನು ಒದಗಿಸುವುದು ಅತ್ಯಂತ ಅವಶ್ಯಕವಾಗಿದೆ. ಇದು ಮಕ್ಕಳ ಆರೋಗ್ಯವನ್ನು ರಕ್ಷಿಸಲು ಮತ್ತು ರೋಗ ಹರಡುವುದನ್ನು ತಡೆಯಲು ಸಹಾಯ ಮಾಡುತ್ತದೆ ಎಂದು ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ ಜಾಲಿಹಾಳ ಹೇಳಿದರು.

ಪಟ್ಟಣದ ಎಸ್‌ಎವಿ ಬಾಲಕರ ಪ್ರೌಢಶಾಲೆಯ 10ನೇ ತರಗತಿ ಮಕ್ಕಳಿಗೆ ಹಮ್ಮಿಕೊಂಡಿದ್ದ ಲಸಿಕೆ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆ ಲಸಿಕೆಗಳನ್ನು ನೀಡಿ ರೋಗಗಳಿಂದ ರಕ್ಷಿಸುವುದು, ಶಾಲೆಗಳಲ್ಲಿ ರೋಗ ಹರಡುವುದನ್ನು ತಡೆಯುವುದು, ಮಕ್ಕಳ ಆರೋಗ್ಯವನ್ನು ಸುಧಾರಿಸುವುದು, ವೈದ್ಯಕೀಯ ವೆಚ್ಚಗಳನ್ನು ಕಡಿಮೆ ಮಾಡುವುದು, ಸಮುದಾಯದ ಆರೋಗ್ಯವನ್ನು ಸುಧಾರಿಸುವುದು ಈ ಲಸಿಕೆ ವಿತರಣೆಯ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಲಸಿಕೆಗಳು ರೋಗಗಳನ್ನು ತಡೆಯುವಲ್ಲಿ ಪರಿಣಾಮಕಾರಿ ಮತ್ತು ಸುರಕ್ಷಿತ ವಿಧಾನವಾಗಿದೆ. ಲಸಿಕೆಗಳು ಮಕ್ಕಳನ್ನು ಮಾರಣಾಂತಿಕ ರೋಗಗಳಿಂದ ರಕ್ಷಿಸುತ್ತವೆ. ರೋಗ ಹರಡುವುದನ್ನು ತಡೆಯುತ್ತವೆ ಮತ್ತು ಸಮುದಾಯದ ಆರೋಗ್ಯವನ್ನು ಸುಧಾರಿಸುತ್ತವೆ. ಆದ್ದರಿಂದ ಮಕ್ಕಳು ಲಸಿಕೆಗಳನ್ನು ಕಡ್ಡಾಯವಾಗಿ ಪಡೆದುಕೊಂಡು ಆರೋಗ್ಯವಾಗಿರಬೇಕೆಂದು ಹೇಳಿದರು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಸಜ್ಜನ, ಶಿಕ್ಷಕ ಶಿಳ್ಳಿನ, ಪ್ರಾಥಮಿಕ ಸುರಕ್ಷಣಾಧಿಕಾರಿ ಸಂಗೀತಾ ಮುಚಖಂಡಿ, ವಿಜಯಲಕ್ಷ್ಮೀ ಪೊಲೀಸ್‌ಪಾಟೀಲ, ರಹಿಮತ್‌ಬಾನು ಶರಬತ್‌ವಾಲಾ ಉಪಸ್ಥಿತರಿದ್ದರು.

### ಧಾರವಾಡ ವಿಶ್ವವಿದ್ಯಾಲಯಕ್ಕೆ ನೂತನ ಕುಲಪತಿಯಾಗಿ ಡಾ. ಎ.ಎಂ. ಖಾನ್ ಆಯ್ಕೆ

# ಜಾತಿ ಆಧಾರಿತವಾಗಿ ಪ್ರಶ್ನಿಸುವುದು ಸರಿಯಲ್ಲ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿಗಳಾಗಿ ಪ್ರೊ. ಎ.ಎಂ. ಖಾನ್ ಅವರನ್ನು ಕುಲಪತಿಯನ್ನಾಗಿ ನೇಮಿಸಿ ಆದೇಶ ಹೊರಡಿಸಿದೆ. ಅವರು ಅಧಿಕಾರ ಸ್ವೀಕರಿಸಿದ ನಂತರ ಈ ನೇಮಕ ಪ್ರಶ್ನಿಸಿ ಡಾ. ಮಹದೇವಪ್ಪ ಕರಿದುರಗನವರ್ ಹೈಕೋರ್ಟ್ ಮೆಟ್ಟಿಲೇರಿದ್ದು, ನೇಮಕಾತಿಗೆ ತಡೆಯಾಜ್ಞೆಯನ್ನು ತಂದಿರುವುದು ಸಮಂಜಸವಲ್ಲ ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ ಅಭಿಪ್ರಾಯ ವ್ಯಕ್ತಪಡಿಸಿದರು.

ಧಾರವಾಡ ನಗರದಲ್ಲಿ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಜಿಲ್ಲಾ ಉಸ್ತುವಾರಿಗಳ ಕಚೇರಿಯಲ್ಲಿ ಅವರು ಮಾತನಾಡುತ್ತಾ, ಡಾ. ಮಹದೇವಪ್ಪ ಕರಿದುರಗನವರ್ ಹೈಕೋರ್ಟ್‌ಗೆ ಹೋಗಿರುವುದು ಅವರ ವೈಯಕ್ತಿಕ ವಿಚಾರ. ಆದರೆ ಒಂದು ಸಮುದಾಯವನ್ನು ಗುರಿಯಾಗಿಸಿಕೊಂಡು ಆ ಸಮುದಾಯದ ವ್ಯಕ್ತಿಯನ್ನು ಕುಲಪತಿಯಾಗಿ ನೇಮಿಸಿರುವುದನ್ನು ಪ್ರಶ್ನಿಸುವ ಅಧಿಕಾರ ಅವರಿಗಿಲ್ಲ ಎಂದರು.



ಈಗಾಗಲೇ ರಾಜ್ಯದ ಇತರೆ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇದ್ದ ಕುಲಪತಿ ಸ್ಥಾನಕ್ಕೆ ಬೇರೆ ಸಮುದಾಯಗಳ, ಜೊತೆಗೆ ದಲಿತ ಸಮುದಾಯಕ್ಕೆ ಸೇರಿದವರನ್ನೂ ಕುಲಪತಿಯಾಗಿ ನೇಮಿಸಿದ್ದಾರೆ. ಬೇರೆ ಯಾರನ್ನೂ ಪ್ರಶ್ನಿಸದೆ ಕೇವಲ ಅಲ್ಪಸಂಖ್ಯಾತ ವ್ಯಕ್ತಿಗೆ ನೀಡಿದ ಕುಲಪತಿ ಸ್ಥಾನವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಹೋಗಿರುವುದು ಅನುಮಾನ ಮೂಡುತ್ತದೆ. ದಲಿತ ಮತ್ತು ಅಲ್ಪಸಂಖ್ಯಾತ ಸಮುದಾಯದವರು ಸಹೋದರರಂತೆ ಬದುಕುತ್ತಿದ್ದಾರೆ. ಈ ಸಾಮರಸ್ಯವನ್ನು ಕೆಡಿಸುವ ಪ್ರಯತ್ನ ಆಗಬಾರದು ಎಂದರು.

ಈ ಸಂದರ್ಭದಲ್ಲಿ ಧಾರವಾಡ ಉಸ್ತುವಾರಿ ಜಾಫರ್ ಡಾಲಾಯತ್, ಮುನ್ನಾ ಕಲ್ಮನಿ, ರಹೀಮ್‌ಸಾಬ್ ದೊಡ್ಡಮನಿ, ಸಲೀಂ ನರಗುಂದ, ಮುಜಮ್ಮಿಲ್ ಬಳ್ಳಾರಿ, ಇಲಿಯಾಸ್ ಶಿರಹಟ್ಟಿ, ಹನೀಫ್ ಇರಕಲ್, ಎಸ್.ಎಸ್. ಖಾದ್ರಿ, ಇಸಾಕ್ ಇರಕಲ್ ಮುಂತಾದವರಿದ್ದರು.

# ತರಬೇತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ವತಿಯಿಂದ ನಡೆಯುತ್ತಿರುವ ಅಂಧ ಹಾಗೂ ಶ್ರವಣ ದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ, ಮೈಸೂರು ಇಲ್ಲಿ ಅಂಧ ಮಕ್ಕಳಿಗೆ ಮತ್ತು ಶ್ರವಣದೋಷವುಳ್ಳ ಮಕ್ಕಳಿಗೆ ಶಿಕ್ಷಕರಾಗಲು 2 ವರ್ಷಗಳ ವಿಶೇಷ ಡಿ.ಎಡ್‌ತರಬೇತಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಡಿ.ಎಡ್ , ಸಾಮಾನ್ಯ ಡಿ.ಇಡಿ ತರಬೇತಿಗೆ ಸಮಾನಾಂತರವಾಗಿವೆ. ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ 50% (ಎಸ್.ಸಿ, ಎಸ್.ಟಿ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ 45%) ಅಂಕಗಳೊಂದಿಗೆ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ಜುಲೈ 25 ರೊಳಗೆ ವೆಬ್‌ಸೈಟ್ https://rehabcouncil.in ನಲ್ಲಿ ಅರ್ಜಿ ಸಲ್ಲಿಸಬಹುದು. ಈ ತರಬೇತಿ ಕಾರ್ಯಕ್ರಮಗಳು ರೆಗ್ಯೂಲರ್ ಆಗಿದ್ದು, ವಿಕಲಚೇತನರು ಸೇರಿದಂತೆ ಸಾಮಾನ್ಯ ವಿದ್ಯಾರ್ಥಿಗಳು ಸಹ ಅರ್ಜಿ ಸಲ್ಲಿಸಬಹುದು. ತರಬೇತಿಗಳು ಸಂಪೂರ್ಣವಾಗಿ ಉಚಿತವಾಗಿದ್ದು, ಯಾವುದೇ ಬೋಧನ ಶುಲ್ಕ ಇರುವುದಿಲ್ಲ.

ತರಬೇತಿ ಕಾರ್ಯಕ್ರಮಗಳು D.Ed.Spl.Ed(VI)- Helen Keller Govt. Teachers Training Centre for Visually Handicapped - KK016, D.Ed.Spl. Ed(HI) – Govt. Teachers Training Centre for Hearing Handicapped - KK015 ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು(ತರಬೇತಿ) ರವರ ಕಚೇರಿ, ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ಸರ್ಕಾರಿ ತರಬೇತಿ ಕೇಂದ್ರ ಪುಲಿಕೇಶಿ ರಸ್ತೆ, ತಿಲಕ್‌ನಗರ, ಮೈಸೂರು –570001. ದೂರವಾಣಿ ಸಂ:0821– 2491600

ತರಬೇತಿ ಸಂಯೋಜಕರು: ಆಶಾ.ವಿ. ಹಿರೇಮಠ್– 9113561620 ಟಿ.ಡಿ. ಮಂಜುನಾಥ್ – 9686762378 ಇವರನ್ನು ಸಂಪರ್ಕಿಸಬಹುದಾಗಿದೆ.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ ನವದೆಹಲಿ ಅವರ ವತಿಯಿಂದ ಪ್ರತಿ ವರ್ಷದ ಡಿಸೆಂಬರ್‌ನ 3ನೇ ದಿನಾಂಕದಂದು ಆಚರಿಸಲಾಗುವ

ರಾಷ್ಟ್ರ ಮಟ್ಟದ "ವಿಶ್ವ ವಿಕಲಚೇತನರ ದಿನಾಚರಣೆ" ಸಮಾರಂಭದಲ್ಲಿ ವಿಕಲಚೇತನರ ಕ್ಷೇತ್ರಕ್ಕೆ ಗಣನೀಯವಾಗಿ ಸೇವೆ ಸಲ್ಲಿಸಿದ ವ್ಯಕ್ತಿ/ಸಂಸ್ಥೆಗಳಿಗೆ 2025ನೇ ಸಾಲಿನ ರಾಷ್ಟ್ರ ಪ್ರಶಸ್ತಿ ನೀಡಲು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ದಿನಾಂಕವನ್ನು ಜುಲೈ 31 ರವರೆಗೆ ವಿಸ್ತರಿಸಲಾಗಿದೆ.

ಜಿಲ್ಲಾ ವ್ಯಾಪ್ತಿಯ ಅರ್ಹ ವಿಕಲಚೇತನರು ಮತ್ತು ಸಂಸ್ಥೆಗಳಿಂದ ರಾಷ್ಟ್ರ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಲು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ ನವದೆಹಲಿ ಅವರ ಜಾಲತಾಣ www.depwd.gov.in ಮತ್ತು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ www.awards.gov.in ಆನ್‌ಲೈನ್ ಮುಖಾಂತರ ನಿಗದಿತ ಅವಧಿಯೊಳಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಕೊಠಡಿ ಸಂಖ್ಯೆ 029, ನೆಲಮಹಡಿ, ಜಿಲ್ಲಾಡಳಿತ ಭವನ, ಗದಗ – 582101 ಸಂಪರ್ಕಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka